ಸಂಪುಟ: 11 ಸಂಚಿಕೆ: 217 | ಪುಟಗಳು: 4+2 | ಬೆಲೆ: ₹ 3.00 | ಶನಿವಾರ, ಅಕ್ಟೋಬರ್ 03, 2026 | Mob : 9448326533- 9019256545 | ಗದಗ

ಸಂಪಾದಕರು : ಎಚ್.ಎಮ್ ಶೇರಿಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 217 Pages : 4+2 Rate : 3.00 Saturday, October 03, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

## ನಾಳೆ 1501 ಧ್ಯಾನಿಗಳಿಂದ 'ನಾದ ಧ್ಯಾನ

**ವಿಜಯಸಾಕ್ಷಿ ಸುದ್ದಿ, ಗದಗ**

ವ್ಯಕ್ತಿಯ ನೆಮ್ಮದಿ, ಆತ್ಮವಿಶ್ವಾಸ ಹಾಗೂ ಮಾನಸಿಕ ಆರೋಗ್ಯದ ಅರಿವು ಮೂಡಿಸುವ ಉದ್ದೇಶದಿಂದ ಪಿರಮಿಡ್ ಸ್ಪಿರಿಚ್ಯುವಲ್ ಸೊಸೈಟಿ ವತಿಯಿಂದ ಅ.4ರಂದು 'ಗದಗ ಧ್ಯಾನ ಮಹಾಯಜ್ಞ-2026' ಆಯೋಜಿಸಲಾಗಿದೆ ಎಂದು ಸಂಸ್ಥೆಯ ಪದಾಧಿಕಾರಿ ವಿದ್ಯಾರಾಣಿ ಕೂಬಳ್ಳಿ ತಿಳಿಸಿದರು.

ನಗರದ ಪತ್ರಿಕಾಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಚಿಕ್ಕಟ್ಟಿ ಶಾಲೆ ಸಭಾಂಗಣದಲ್ಲಿ ಬೆಳಗ್ಗೆ 9ರಿಂದ ಮಧ್ಯಾಹ್ನ 2ರವರೆಗೆ ಕಾರ್ಯಕ್ರಮ ನಡೆಯಲಿದೆ. ಬೆಳಗ್ಗೆ 9ರಿಂದ ಮಧ್ಯಾಹ್ನ 12ರವರೆಗೆ 1501 ಧ್ಯಾನಿಗಳಿಂದ ಮೂರು ಗಂಟೆಗಳ 'ನಾದ ಧ್ಯಾನ' ನಡೆಯಲಿದ್ದು, ನಂತರ ಸಭಾ ಕಾರ್ಯಕ್ರಮ ಜರುಗಲಿದೆ ಎಂದರು.

ಬ್ರಹ್ಮರ್ಷಿ ಪ್ರೇಮನಾಥ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದು, ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ. ಶಾಸಕ ಎಚ್.ಕೆ. ಪಾಟೀಲ ಅವರು 'ಮಹಾಯೋಗಿ ವೇಮನ ಪಿರಮಿಡ್ ಜ್ಞಾನ-ಧ್ಯಾನ-ದಾನಯೋಗ' ಗ್ರಂಥವನ್ನು ಲೋಕಾರ್ಪಣೆ ಮಾಡಲಿದ್ದಾರೆ ಎಂದು ಹೇಳಿದರು.

ಧ್ಯಾನದ ಮೂಲಕ ವ್ಯಕ್ತಿಯಲ್ಲಿ ನೆಮ್ಮದಿ, ಆತ್ಮವಿಶ್ವಾಸ ಹಾಗೂ ಆರೋಗ್ಯದ ಕುರಿತು ಅರಿವು ಮೂಡಿಸಲು ಸಾಧ್ಯ. ಜಿಲ್ಲೆಯಲ್ಲಿ ಈಗಾಗಲೇ 32 ಉಚಿತ ಜ್ಞಾನ ಕೇಂದ್ರಗಳನ್ನು ಆರಂಭಿಸಲಾಗಿದ್ದು, ಧ್ಯಾನ ಮತ್ತು ಜ್ಞಾನದ ಮೂಲಕ ಹಲವರು ತಮ್ಮ ಆರೋಗ್ಯ ಹಾಗೂ ಜೀವನಶೈಲಿಯಲ್ಲಿ ಬದಲಾವಣೆ ಕಂಡುಕೊಂಡಿದ್ದಾರೆ ಎಂದು ವಿದ್ಯಾರಾಣಿ ಕೂಬಳ್ಳಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಲಕ್ಷ್ಮಣ ಪೂದಂಡಿ, ರಮೇಶ ಹಳ್ಳಿಕೇರಿ ಹಾಗೂ ನೇತ್ರಾವತಿ ಕಟಗೇರಿ ಉಪಸ್ಥಿತರಿದ್ದರು.

## ಗಾಂಧೀಜಿ-ಶಾಸ್ತ್ರಿಜಿ ಜಯಂತಿ ಆಚರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಅಡವಿಸೋಮಾಪೂರ ಸಣ್ಣ ತಾಂಡೆಯ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿ ಯನ್ನು ಅರ್ಥಪೂಣ ರ್ವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್. ಅವರು ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜೀವನ, ಸರಳತೆ, ದೇಶಸೇವೆ ಮತ್ತು ಅವರು ಸಾರಿದ ಸಂದೇಶಗಳ ಕುರಿತು ಮಾತನಾಡಿದರು.

ಇದೇ ಸಂದರ್ಭದಲ್ಲಿ ಶಾಲೆಗೆ ಸುಮಾರು ₹6 ಸಾವಿರ ಮೌಲ್ಯದ ಗ್ರೀನ್ ಬೋರ್ಡ್‌ನ್ನು ದೇಣಿಗೆಯಾಗಿ ನೀಡಿದ ಶ್ರೀಮತಿ ಗೀತಾ ಬಬ್ಲು ರಾಠೋಡ ಅವರನ್ನು ಶಾಲೆಯ ಪರವಾಗಿ ಸನ್ಮಾನಿಸಲಾಯಿತು.ಶಿಕ್ಷಕಿಯರಾದ ಪಿ.ಬಿ. ಕಿಲಬನವರ, ಎಸ್.ಟಿ. ಹಳಕಟ್ಟಿ, ದೀಪಾ ಪವಾರ, ಶಾಲಾ ಉಸ್ತುವಾರಿ ಸಮಿತಿ ಅಧ್ಯಕ್ಷೆ ಪಾರವ್ವ ಉಮೇಶ ಲಮಾಣಿ, ಉಪಾಧ್ಯಕ್ಷ ಮಂಜಪ್ಪ ರಜಪೂತ, ಸಿದ್ದಪ್ಪ ಲಮಾಣಿ, ಪರಶುರಾಮ ಲಮಾಣಿ, ಲಕ್ಷ್ಮಣ ಲಮಾಣಿ, ದೇವಕ್ಕ ಲಮಾಣಿ, ಗಂಗವ್ವ ಲಮಾಣಿ, ಐಶ್ವರ್ಯ ರಾಠೋಡ ಹಾಗೂ ಶಾಲಾ ಮಕ್ಕಳು ಉಪಸ್ಥಿತರಿದ್ದರು.

## ಸಭಾಧ್ಯಕ್ಷನಾಗಿ ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸುವೆ: ಜಿ.ಎಸ್. ಪಾಟೀಲ

# ಸಾಧು-ಸಂತರ ಆಶೀರ್ವಾದವೇ ಸಾರ್ವಜನಿಕ ಬದುಕಿನ ಶಕ್ತಿ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಾಧು-ಸಂತರು, ಶರಣರು ಹಾಗೂ ಹಿರಿಯರ ಆಶೀರ್ವಾದವೇ ತಮ್ಮ ಸಾರ್ವಜನಿಕ ಬದುಕಿನ ಶಕ್ತಿಯಾಗಿದೆ. ಪೂಜ್ಯರ ಮಾರ್ಗದಶ ರ್ನದೊಂದಿಗೆ ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷ ಸ್ಥಾನಕ್ಕೆ ದೊರೆತಿರುವ ಜವಾಬ್ದಾರಿಯನ್ನು ನಿಷ್ಠೆ, ಪ್ರಾಮಾಣಿಕತೆ ಹಾಗೂ ಬದ್ಧತೆಯಿಂದ ನಿರ್ವಹಿಸುವುದಾಗಿ ನೂತನ ಸಭಾಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಸಮೀಪದ ಅಬ್ಬಿಗೇರಿಯ ಸದ್ಗುರು ಶ್ರೀ ಯಲ್ಲಾಲಿಂಗೇಶ್ವರ ಶಾಖಾಮಠದಲ್ಲಿ ನಡೆದ ಅಭಿನಂದನಾ ಹಾಗೂ ಸನ್ಮಾನ ಸಮಾರಂಭದಲ್ಲಿ ಗೌರವ ಸ್ವೀಕರಿಸಿ ಅವರು ಮಾತನಾಡಿದರು.

ಸಭಾಧ್ಯಕ್ಷನಾಗಿ ಸದನದಲ್ಲಿ ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸುವ ಜತೆಗೆ, ವಿಧಾನಸಭೆಯ ಘನತೆ ಹಾಗೂ ಸಂಸದೀಯ ಪರಂಪರೆಯನ್ನು ಕಾಪಾಡಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಸಮಾಜದಲ್ಲಿ ಶಾಂತಿ, ಸಾಮರಸ್ಯ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಸಾಧು-ಸಂತರ ಪಾತ್ರ ಮಹತ್ವದ್ದಾಗಿದೆ. ಮಠಾಧೀಶರು ಹಾಗೂ ಶರಣರ ವಿಚಾರಧಾರೆ ಸಮಾಜಕ್ಕೆ ಸದಾ ದಾರಿದೀಪವಾಗಿದ್ದು, ಅವರ ಆಶೀರ್ವಾದ ಸಾರ್ವಜನಿಕ ಸೇವೆಗೆ ಮತ್ತಷ್ಟು ಬಲ ನೀಡುತ್ತದೆ ಎಂದರು.



ಶ್ರೀಮಠದ ಬಸವರಾಜ ಶರಣರು ಮಾತನಾಡಿ, ಈ ಹಿಂದೆ ಶ್ರೀಮಠಕ್ಕೆ ಆಗಮಿಸಿದ್ದ ಮುಗಳಖೋಡದ ಪೂಜ್ಯರು ಜಿ.ಎಸ್. ಪಾಟೀಲರು ಅತ್ಯುನ್ನತ ಸ್ಥಾನಕ್ಕೇರುತ್ತಾರೆ ಎಂದು ಭವಿಷ್ಯ ನುಡಿದಿದ್ದರು.

> ಸಭಾಧ್ಯಕ್ಷನಾಗಿ ಸದನದಲ್ಲಿ ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸಿ, ವಿಧಾನಸಭೆಯ ಘನತೆ ಹಾಗೂ ಸಂಸದೀಯ ಪರಂಪರೆಯನ್ನು ಕಾಪಾಡಲು ನಿಷ್ಠೆ ಮತ್ತು ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸುತ್ತೇನೆ.
>
> – ಜಿ.ಎಸ್. ಪಾಟೀಲ, ವಿಧಾನಸಭಾಧ್ಯಕ್ಷ

ಪಾಟೀಲರು ಸಚಿವ ಸ್ಥಾನಕ್ಕೆ ಪ್ರಬಲ ಆಕಾಂಕ್ಷೆ ಹೊಂದಿದ್ದರೂ, ಸದ್ಗುರುವಿನ ಸಂಕಲ್ಪ ಬೇರೆಯಾಗಿ-ತ್ತು ಎಂಬುದನ್ನು ಅಂದೇ ಪೂಜ್ಯರು ತಿಳಿಸಿದ್ದರು. ಇದೀಗ ಅವರು ವಿಧಾನಸಭೆಯ ಸಭಾಧ್ಯಕ್ಷರಾಗಿ ಶ್ರೀಮಠಕ್ಕೆ ಆಗಮಿಸಿ ಹಲವು ಪೂಜ್ಯರ ಸಮ್ಮುಖದಲ್ಲಿ ಸನ್ಮಾನ ಸ್ವೀಕರಿಸುತ್ತಿರುವುದು ಅವರ ಪೂರ್ವಜನ್ಮದ ಪುಣ್ಯಫಲ ಎಂದರು.

ಅಬ್ಬಿಗೇರಿಯ ಸದ್ಗುರು ಶ್ರೀ ಯಲ್ಲಾಲಿಂಗೇಶ್ವರ ಮಠದ ಬಸವರಾಜ ಸ್ವಾಮೀಜಿ, ಇಟ-ಗಿಯ ಶಿವಶರಣ ಗದಿಗೆಪ್ಪಜ್ಜನವರು, ಗಜೇಂದ್ರಗಡದ ಚಂದ್ರಶೇಖರಯ್ಯ ಸ್ವಾಮೀಜಿ, ಸವಡಿಯ ಸ್ವಾಮೀಜಿ, ಮರುಳಸಿದ್ದೇಶ್ವರ ಸ್ವಾಮೀಜಿ, ಹೊಳೆಆಲೂರಿನ ಯಚ್ಚರೇಶ್ವರ ಸ್ವಾಮೀಜಿ, ಗುಳಗುಳಿಯ ಋಷಿಕುಮಾರ್ ಸ್ವಾಮೀಜಿ, ಚಿಕುಂತಿ-ಮೋಣಕಾಲ್ಮೂರಿನ ಶಿವಮೂರ್ತಿ ಸ್ವಾಮೀಜಿ, ಬಿಸರಹಳ್ಳಿಯ ಮಳೆಯ್ಯಯ್ಯ ಸ್ವಾಮೀಜಿ, ಆನಂದಯ್ಯ ಸ್ವಾಮೀಜಿ, ಸವಡಿ ಚಂದ್ರಶೇಖರಯ್ಯ ಸ್ವಾಮೀಜಿ, ಲಕ್ಕುಂಡಿಯ ಹುಚ್ಚಯ್ಯ ಸ್ವಾಮೀಜಿ, ಅಸೂಟಿ ಆಶ್ರಮದ ಶರೀಫ ಸ್ವಾಮೀಜಿ, ಹಿರೇಸಿಂಧೋಗಿಯ ಮರುಳಸಿದ್ದಯ್ಯ ಸ್ವಾಮೀಜಿ ಹಾಗೂ ನಾಗರಾಜಯ್ಯ ಸ್ವಾಮೀಜಿ, ಲಕ್ಕುಂಡಿ-ಹರ್ಲಾಪುರದ ಶಿವಮುನಿ ಸ್ವಾಮೀಜಿ, ನಾಗಯ್ಯ ಸ್ವಾಮೀಜಿ ಸೇರಿದಂತೆ ವಿವಿಧ ಮಠಗಳ ಪೂಜ್ಯರು ಉಪಸ್ಥಿತ-ರಿದ್ದು ಜಿ.ಎಸ್. ಪಾಟೀಲರಿಗೆ ಆಶೀರ್ವಾದ ನೀಡಿದರು. ಇದೇ ಸಂದರ್ಭದಲ್ಲಿ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ವಿಧಾನಸಭೆಯ ನೂತನ ಸಭಾಧ್ಯಕ್ಷ ಜಿ.ಎಸ್. ಪಾಟೀಲ ಅವರನ್ನು ಸನ್ಮಾನಿಸಲಾಯಿತು. ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಜಿ.ಬಿ. ಪಾಟೀಲ, ಕಿಶೋರ್ ನಾಗರಕಟ್ಟಿ, ಸಿ.ಕೆ.ಎಚ್. ಕಡಣಿಶಾಸ್ತ್ರೀ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ರೋಣ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮಿಥುನ್ ಜಿ. ಪಾಟೀಲ, ಅಕ್ಷಯ ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಗದಿಗೆಪ್ಪ ಕಿರೇಸೂರ, ಸಂಜಯ ದೊಡಮನಿ ಸೇರಿದಂತೆ ಅನೇಕ ಮುಖಂಡರು ಪಾಲ್ಗೊಂಡಿದ್ದರು.

## ಸ್ವಾರ್ಥದ 'ನಾನು' ಬಿಟ್ಟು ಸಾಮೂಹಿಕ 'ನಾವು' ಬೆಳೆಸಿಕೊಳ್ಳಿ: ಡಿಸಿ ಶ್ರೀಧರ್

# ಗಾಂಧೀಜಿ-ಶಾಸ್ತ್ರೀಜಿ ಬದುಕೇ ಸಮಾಜಕ್ಕೆ ದಾರಿದೀಪ



**ವಿಜಯಸಾಕ್ಷಿ ಸುದ್ದಿ, ಗದಗ**

'ನಾನು, ನನ್ನದು' ಎನ್ನುವ ಸಂಕುಚಿತ ಮನೋಭಾವದಿಂದ ಹೊರಬಂದು 'ನಾವು, ನಮ್ಮದು' ಎಂಬ ವಿಶಾಲ ದೃಷ್ಟಿಕೋನ ಬೆಳೆಸಿಕೊಳ್ಳಬೇಕು. ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಅವರ ಸರಳತೆ, ವಿನಮ್ರತೆ, ಸತ್ಯ ಮತ್ತು ಸೇವೆಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಮಹಾತ್ಮ ಗಾಂಧೀಜಿ ಅವರ 157ನೇ ಜಯಂತಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಅವರ 122ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿಭಿನ್ನ ಕಾಲಘಟ್ಟದ ನಾಯಕರಾಗಿದ್ದ ಗಾಂಧೀಜಿ ಮತ್ತು ಶಾಸ್ತ್ರೀಜಿ ಅವರ ಬದುಕಿನ ಶೈಲಿ ಬೇರೆ ಬೇರೆಯಾಗಿದ್ದರೂ, ಜನರನ್ನು ಸಮಾನವಾಗಿ ಕಾಣುವುದು ಮತ್ತು ಸಂಕಷ್ಟದಲ್ಲಿರುವವರ ನೋವಿಗೆ ಸ್ಪಂದಿಸುವುದು ಇಬ್ಬರ ಪ್ರಮುಖ ಆಶಯವಾಗಿತ್ತು. ಉನ್ನತ ಹುದ್ದೆಯಲ್ಲಿದ್ದರೂ ಸರಳತೆ ಹಾಗೂ ವಿನಮ್ರತೆಯನ್ನು ಬಿಟ್ಟುಕೊಡಲಿಲ್ಲ. ನಿಸ್ವಾರ್ಥ ಸೇವೆಯ ಮೂಲಕ ಸಮಾಜದಲ್ಲಿ ದೊಡ್ಡ ಬದಲಾವಣೆ ತರಬಹುದು ಎಂಬುದನ್ನು ಅವರ ಬದುಕು ತೋರಿಸಿಕೊಟ್ಟಿದೆ ಎಂದರು.

ಆಧುನಿಕ ಬದುಕಿನಲ್ಲಿ 'ನಾನು' ಮತ್ತು 'ನನ್ನದು' ಎನ್ನುವ ಮನೋಭಾವ ಹೆಚ್ಚುತ್ತಿರುವುದು ಸಮಾಜದ ಸಾಮರಸ್ಯಕ್ಕೆ ಸವಾಲಾಗಿದೆ. ವೈಯಕ್ತಿಕ ಹಿತಕ್ಕಿಂತ ಸಾಮೂಹಿಕ ಒಳಿತಿಗೆ ಆದ್ಯತೆ ನೀಡಬೇಕು. ಪರಸ್ಪರರ ನೋವು, ನಲಿವುಗಳಿಗೆ ಸ್ಪಂದಿಸುವ ಮನಸ್ಸು ಬೆಳೆದಾಗ ಸಾಮಾಜಿಕ ಅನಿಷ್ಟತೆಗಳು ದೂರವಾಗುತ್ತವೆ ಎಂದು ತಿಳಿಸಿದರು.

ಮಹಾತ್ಮ ಗಾಂಧೀಜಿ ಅವರ 'ಮಾಡು ಇಲ್ಲವೇ ಮಡಿ' ಕರೆ ಸ್ವಾತಂತ್ರ್ಯ ಹೋರಾಟಕ್ಕೆ ಹೊಸ ಶಕ್ತಿ ನೀಡಿತು. ಶಾಸ್ತ್ರೀಜಿ ಅವರ 'ಜೈ ಜವಾನ್, ಜೈ ಕಿಸಾನ್' ಘೋಷಣೆ ದೇಶದ ಸೈನಿಕರು ಹಾಗೂ ರೈತರ ಆತ್ಮವಿಶ್ವಾಸ ಹೆಚ್ಚಿಸಿತು. ರಾಷ್ಟ್ರ ನಿರ್ಮಾಣದಲ್ಲಿ ಇಬ್ಬರ ಕೊಡುಗೆ ಸ್ಮರಣೀಯ ಎಂದು ಶ್ರೀಧರ್ ಹೇಳಿದರು.

ಜಿಲ್ಲಾ ಪಂಚಾಯಿತಿ ಸಿಇಒ ಮುಕುಲ್ ಜೈನ್ ಮಾತನಾಡಿ, ಸಾರ್ವಜನಿಕ ಜೀವನದಲ್ಲಿ ನಿರ್ಧಾರ ಕೈಗೊಳ್ಳುವಾಗ ಸಮಾಜದ ಬಡ ಹಾಗೂ ದುರ್ಬಲ ವ್ಯಕ್ತಿಯನ್ನು ನೆನಪಿಸಿಕೊಳ್ಳಬೇಕು ಎಂಬ ಗಾಂಧೀಜಿ ಅವರ ಚಿಂತನೆ ಇಂದಿಗೂ ಪ್ರಸ್ತುತವಾಗಿದೆ ಎಂದರು.

ಗ್ರಾಮ ಸ್ವರಾಜ್ಯದ ಪರಿಕಲ್ಪನೆಯಂತೆ ಗ್ರಾಮಗಳು ಸ್ವಾವಲಂಬಿಯಾಗಬೇಕು. ಗ್ರಾಮಗಳ ಪ್ರಗತಿಯೇ ರಾಷ್ಟ್ರದ ಅಭಿವೃದ್ಧಿಗೆ ಬುನಾದಿ. ಸತ್ಯ, ಅಹಿಂಸೆ, ಸರಳತೆ ಹಾಗೂ ಸೇವಾ ಮನೋಭಾವವನ್ನು ಪ್ರತಿಯೊಬ್ಬರೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಡಾ. ವೆಂಕಟೇಶ ಆಲ್ಕೋಡ ಹಾಗೂ ತಂಡದವರು ರಾಷ್ಟ್ರೀಯ ಗೀತೆ, 'ವಂದೇ ಮಾತರಂ', ನಾಡಗೀತೆ ಮತ್ತು ಗಾಂಧೀಜಿ ಅವರ ಪ್ರಿಯ ಭಜನೆಗಳನ್ನು ಪ್ರಸ್ತುತಪಡಿಸಿದರು. ಎ.ಎಸ್.ಎಸ್. ಕಾಲೇಜಿನ ವಿದ್ಯಾರ್ಥಿಗಳಾದ ಅಕ್ಷಯ, ಸಾಧಿಯ ಹಾಗೂ ಸುಚಿತ್ರ ಅವರು ಭಗವದ್ಗೀತೆ, ಕುರಾನ್ ಮತ್ತು ಬೈಬಲ್‌ನ ಆಯ್ದ ಚರಣಗಳನ್ನು ಪಠಿಸಿದರು. ವಿದ್ಯಾ ರ್ಥಿಗಳನ್ನು ಜಿಲ್ಲಾಧಿಕಾರಿಗಳು ಗೌರವಿಸಿದರು.

ಗಾಂಧೀಜಿ ಜಯಂತಿ ಅಂಗವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯೋಜಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್., ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಜಿಪಂ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ನಾಳೆ ರಾಮಕೃಷ್ಣ ಹೆಗಡೆ ಶತಮಾನೋತ್ಸವ ಸಮಾರಂಭ




**ವಿಜಯಸಾಕ್ಷಿ ಸುದ್ದಿ, ಗದಗ**

ಮಾಜಿ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆ ಅವರ ಶತಮಾನೋತ್ಸವ ಕಾರ್ಯಕ್ರಮವನ್ನು ಅ.4ರಂದು ಸಂಜೆ 5ಕ್ಕೆ ನಗರದ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದೆ ಎಂದು ರಾಮಕೃಷ್ಣ ಹೆಗಡೆ ಅಭಿಮಾನಿ ಬಳಗದ ಅಶೋಕ ನವಲಗುಂದ ತಿಳಿಸಿದರು. ಶುಕ್ರವಾರ ನಗರದ ಪತ್ರಿಕಾಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಮಕೃಷ್ಣ ಹೆಗಡೆ ಅವರು ರಾಜ್ಯದ ರಾಜಕಾರಣಕ್ಕೆ ವಿಶಿಷ್ಟ ಕೊಡುಗೆ ನೀಡಿದ ನಾಯಕರು. ಮೌಲ್ಯಾಧಾರಿತ ಹಾಗೂ ಜನಪರ ರಾಜಕಾರಣಕ್ಕೆ ಅವರು ನೀಡಿದ ಆದ್ಯತೆ ಇಂದಿಗೂ ಪ್ರಸ್ತುತವಾಗಿದೆ ಎಂದರು.

ಹೆಗಡೆ ಅವರ ಆಡಳಿತ ವೈಖರಿ, ರಾಜಕೀಯ ಚಿಂತನೆ ಹಾಗೂ ಜನಪರ ಕಾರ್ಯಗಳನ್ನು ಸ್ಮರಿಸುವ ಉದ್ದೇಶದಿಂದ ಶತಮಾನೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಅವರ ರಾಜ-ಕೀಯ ಬದುಕು ಹಾಗೂ ಆಡಳಿತದ ಕೊಡುಗೆಗಳ ಕುರಿತು ಚರ್ಚೆ ನಡೆಯಲಿದೆ ಎಂದು ಹೇಳಿದರು.

ಸಂಸದ ಬಸವರಾಜ ಬೊಮ್ಮಾಯಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಮಾಜಿ ಸಚಿವ ಆರ್.ವಿ. ದೇಶಪಾಂಡೆ ಉಪನ್ಯಾಸ ನೀಡಲಿದ್ದಾರೆ. ಪಿ.ಜಿ.ಆರ್. ಶಿಂಧೆ, ಶಾಸಕ ಸಿ.ಸಿ. ಪಾಟೀಲ, ಮಾಜಿ ಶಾಸಕ ಕಳಕಪ್ಪ ಬಂಡಿ, ಶಾಸಕ ಡಾ. ಚಂದ್ರು ಲಮಾಣಿ ಹಾಗೂ ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

ರಾಮಕೃಷ್ಣ ಹೆಗಡೆ ಅವರ ಅಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಶತಮಾನೋತ್ಸವ ಆಚರಣೆಗೆ ಸಾಕ್ಷಿಯಾಗಬೇಕು ಎಂದು ಅಶೋಕ ನವಲಗುಂದ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ರಮೇಶ ಹತ್ತಿಕಾಳ, ಕೆ.ಪಿ. ಕೋಟಿಗೌಡ, ಮುತ್ತಣ್ಣ ಸುಂಕದ, ರಮೇಶ ಸಜ್ಜಗಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸ್ವಚ್ಛತೆಯೇ ಗಾಂಧೀಜಿಗೆ ನಿಜವಾದ ಗೌರವ



> ಗಾಂಧೀಜಿ ಜಯಂತಿಗೆ ಮಾತ್ರ ಸ್ವಚ್ಛತಾ ಕಾರ್ಯ ಸೀಮಿತವಾಗಬಾರದು. ಪ್ರತಿದಿನವೂ ನಮ್ಮ ಮನೆ, ರಸ್ತೆ ಹಾಗೂ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ಗಾಂಧೀಜಿ ಅವರ ಸ್ವಚ್ಛ ಭಾರತದ ಕನಸನ್ನು ನನಸಾಗಿಸಬೇಕು.
>
> – ಡಾ. ಚಂದ್ರು ಲಮಾಣಿ, ಶಾಸಕ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಹಾತ್ಮ ಗಾಂಧೀಜಿ ಅವರ ಸತ್ಯ ಮತ್ತು ಅಹಿಂಸೆಯ ಸಿದ್ಧಾಂತಗಳು ಪ್ರತಿಯೊಬ್ಬರ ಬದುಕಿಗೆ ಆದರ್ಶವಾಗಬೇಕು. ಅವರ ಚಿಂತನೆ ಹಾಗೂ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಸಮಾಜಕ್ಕೆ ಉತ್ತಮ ದಾರಿ ತೋರಿಸಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಪಟ್ಟಣದಲ್ಲಿ ಶುಕ್ರವಾರ ಬಿಜೆಪಿ ಮಂಡಳ ವತಿಯಿಂದ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರೀಜಿ ಜಯಂತಿ ಅಂಗವಾಗಿ ಆಯೋಜಿಸಿದ್ದ ಸ್ವಚ್ಛತಾ ಅಭಿಯಾನದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಪಂಪ ವೃತ್ತ, ಚನ್ನಮ್ಮ ವೃತ್ತ ಸೇರಿದಂತೆ ಪಟ್ಟಣದ ವಿವಿಧೆಡೆ ಇರುವ ಮಹಾತ್ಮರ ಪ್ರತಿಮೆಗಳು ಹಾಗೂ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛಗೊಳಿಸುವ ಮೂಲಕ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಗಾಂಧೀಜಿ ಅವರು ಸ್ವಚ್ಛ ಭಾರತದ ಕನಸು ಕಂಡಿದ್ದರು. ಸಾಮೂಹಿಕ ಸ್ವಚ್ಛತಾ ಚಟುವಟಿ-ಕೆಗಳನ್ನು ಬಲಪಡಿಸುವುದು ಸ್ವಚ್ಛತಾ ಸೇವಾ ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ಪ್ರತಿಯೊಬ್ಬರೂ ಸ್ವಯಂಪ್ರೇರಣೆಯಿಂದ ಸ್ವಚ್ಛತಾ ಕಾರ್ಯದಲ್ಲಿ ಕೈಜೋಡಿಸಿದಾಗ ಮಾತ್ರ ಇದರ ಆಶಯ ಸಂಪೂರ್ಣ ಯಶಸ್ವಿಯಾಗಲು ಸಾಧ್ಯ ಎಂದು ಲಮಾಣಿ ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರ ಸ್ವಚ್ಛತಾ ಸಂಕಲ್ಪ ಹಾಗೂ ಗಾಂಧೀಜಿ ಅವರ ಸ್ವಚ್ಛ ಭಾರತದ ಕನಸನ್ನು ಸಾಕಾರಗೊಳಿಸಲು ಪ್ರತಿಯೊಬ್ಬರೂ ಕೈಜೋಡಿಸಬೇಕು. ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರೀಜಿ ಜೀವನ ಹಾಗೂ ತತ್ವಗಳು ಸಮಾಜಕ್ಕೆ ಸದಾ ಉತ್ತಮ ಸಂದೇಶ ನೀಡುತ್ತವೆ ಎಂದರು. ಪ್ರತಿದಿನವೂ ಮನೆ, ರಸ್ತೆ ಹಾಗೂ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಡುವ ಜವಾಬ್ದಾರಿಯನ್ನು ಪ್ರತಿಯೊಬ್ಬರೂ ನಿರ್ವಹಿಸಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಶಿರಹಟ್ಟಿ ಬಿಜೆಪಿ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಪ್ರಧಾನ ಕಾರ್ಯದರ್ಶಿ ಗಂಗಾಧರ ಮೆಣಸಿನಕಾಯಿ, ಮಂಡಳ ಯುವ ಘಟಕ ಅಧ್ಯಕ್ಷ ಬಸವರಾಜ ಚಕ್ರಸಾಲಿ, ನಗರ ಪ್ರಧಾನ ಕಾರ್ಯದರ್ಶಿ ಪ್ರವೀಣ ಬೋಮಲೆ, ದುಂಡೇಶ ಕೊಟಗಿ, ಎಂ.ಆರ್. ಪಾಟೀಲ, ನಿಂಗಪ್ಪ ಬನ್ನಿ, ನೀಲಪ್ಪ ಕರ್ಜೆಕಣ್ಣವರ, ಮಹಾದೇವಪ್ಪ ಅಣ್ಣಿಗೇರಿ, ಅಶೋಕ ನೀರಾಲೋಟ, ಅನಿಲ ಮುಳಗುಂದ, ಶಿವಯೋಗಿ ಅಂಕಲಕೋಟಿ, ರಾಜಶೇಖರ ಶಿಗ್ಲಿಮಠ, ಮಂಜುನಾಥ ಹೊಗೆಸೊಪ್ಪಿನ, ರಾಮು ನಾಯಕ, ಮಂಜುನಾಥ ಗಜಾಕೋಶ, ವೀರೇಶ ಸಾಸಲವಾಡ, ಮಂಜುನಾಥ ಗದಗ, ಉಳವೇಶಗೌಡ ಪಾಟೀಲ, ಬಸವರಾಜ ಮಜ್ಜಿಗುಡ್ಡ, ವಿಜಯ ಬೂದಿಹಾಳ, ವಡಕಣ್ಣವರ ಸೇ-ರಿದಂತೆ ಬಿಜೆಪಿ ಕಾರ್ಯಕರ್ತರು ಉಪಸ್ಥಿತರಿದ್ದರು.

## ಪಶ್ಚಿಮ ಪದವೀಧರ ಕ್ಷೇತ್ರ ಚುನಾವಣೆ: ಗದಗ ಉಸ್ತುವಾರಿಯಾಗಿ ಗೋವಿಂದಗೌಡ್ರ ನೇಮಕ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ಚುನಾವಣಾ ಉಸ್ತುವಾರಿಯಾಗಿ ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಅವರನ್ನು ನೇಮಕ ಮಾಡಲಾಗಿದೆ.

ಜೆಡಿಎಸ್ ರಾಜ್ಯಾಧ್ಯಕ್ಷ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಈ ಕು-ರಿತು ಆದೇಶ ಹೊರಡಿಸಿದ್ದು, ಪಶ್ಚಿಮ ಪದವೀಧರ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ ಎಸ್.ವಿ. ಸಂಕನೂರ ಅವರ ಪರವಾಗಿ ಗದಗ ಜಿಲ್ಲೆಯಲ್ಲಿ ಚುನಾವಣಾ ಕಾರ್ಯಚಟುವಟಿಕೆಗಳನ್ನು ಸಂಘಟಿಸುವ ಜವಾಬ್ದಾ-ರಿಯನ್ನು ಗೋವಿಂದಗೌಡ್ರ ಅವರಿಗೆ ವಹಿಸಲಾಗಿದೆ.

ಪಶ್ಚಿಮ ಪದವೀಧರ ಕ್ಷೇತ್ರದ ವ್ಯಾಪ್ತಿಗೆ ಬರುವ ಜಿಲ್ಲೆಗಳಲ್ಲಿ ಚುನಾವಣಾ ಸಿದ್ಧತೆಗಳು ಚುರುಕು ಗೊಂಡಿರುವ ಬೆನ್ನಲ್ಲೇ ಜೆಡಿಎಸ್ ಜಿಲ್ಲಾ ಮಟ್ಟದಲ್ಲಿ ಉಸ್ತುವಾರಿಗಳನ್ನು ನೇಮಕ ಮಾಡಿದೆ. ಪಕ್ಷದ ಸಂಘಟನೆ ಬಲಪಡಿಸುವುದು, ಪದವೀಧರ ಮತದಾರರನ್ನು ಸಂಪರ್ಕಿಸುವುದು ಸೇರಿದಂತೆ ಚುನಾವಣಾ ಕಾರ್ಯತಂತ್ರದಂತೆ ಕಾರ್ಯನಿರ್ವಹಿಸುವಂತೆ ಉಸ್ತುವಾ ರಿಗಳಿಗೆ ಸೂಚಿಸಲಾಗಿದೆ. ಗದಗ ಜಿಲ್ಲೆಯಲ್ಲಿ ಎನ್‌ಡಿಎ ಅಭ್ಯರ್ಥಿಯ ಪರ ವಾಗಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರನ್ನು ಸಂಘಟಿಸಿ ಚುನಾವಣಾ ಪ್ರಚಾರ ಮತ್ತು ಮತದಾರರ ಸಂಪರ್ಕ ಕಾರ್ಯಗಳಿಗೆ ವೇಗ ನೀಡುವ ಹೊಣೆ ಇದೀಗ ವೆಂಕನಗೌಡ ಗೋವಿಂದಗೌಡ್ರ ಅವರ ಮೇಲಿದೆ.

> ಪಕ್ಷದ ಸಂಘಟನೆ ಹಾಗೂ ಕಾರ್ಯಕರ್ತರ ಸಹಕಾರದೊಂದಿಗೆ ಅಭ್ಯರ್ಥಿಯ ಪರವಾಗಿ ಪರಿಣಾಮಕಾರಿ ಚುನಾವಣಾ ಕಾರ್ಯಚಟುವಟಿಕೆಗಳನ್ನು ನಡೆಸಲಾಗುವುದು.
>
> – ವೆಂಕನಗೌಡ ಗೋವಿಂದಗೌಡ್ರ

## ಸಾರ್ವಜನಿಕರ ಅನುಕೂಲಕ್ಕೆ 5 ಬೆಂಚ್ ಕೊಡುಗೆ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಅಂಗವಾಗಿ ಕರ್ನಾಟಕ ಗ್ರಾಮೀಣ ಬ್ಯಾಂಕಿನ ನಿವೃತ್ತ ನೌಕರರ ವತಿಯಿಂದ ಶ್ರೀ ಗಂಗಾವತಿ ವೆಂಕೋಬಣ್ಣನವರ ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ಸಾರ್ವಜನಿಕರ ಅನುಕೂಲಕ್ಕಾಗಿ ಐದು ಬೆಂಚ್‌ಗಳನ್ನು ಕೊಡುಗೆ ಯಾಗಿ ನೀಡಲಾಯಿತು.

ಈ ಸಂದರ್ಭದಲ್ಲಿ ನಿವೃತ್ತ ಬ್ಯಾಂಕ್ ನೌಕರರು, ಸಮಾಜ ಸೇವಕ ಸಂಚಿ ಶಿವಕುಮಾರ್, ಆಸ್ಪತ್ರೆಯ ವೈದ್ಯರಾದ ಡಾ. ಶಿವಕುಮಾರ್, ಡಾ. ಪ್ರವೀಣ್, ಡಾ. ತಿಪ್ಪೇಸ್ವಾಮಿ, ಡಾ. ವಿಶ್ವನಾಥ್, ಡಾ. ಅರ್ಜುಮನಿಸಾ ಹಾಗೂ ಆಸ್ಪತ್ರೆಯ ಸಿಬ್ಬಂದಿ ಉಪಸ್ಥಿತರಿದ್ದರು.

### ಹಣ ಪಡೆದು ಹೊರಬರುವವರ ಸುರಕ್ಷತೆಗೆ ಬ್ಯಾಂಕ್‌ಗಳಿಗೆ ಕಟ್ಟುನಿಟ್ಟಿನ ಸೂಚನೆ

# ಬ್ಯಾಂಕ್ ಗ್ರಾಹಕರೇ ಎಚ್ಚರ... ಹಿಂಬಾಲಿಸುವ ಕಳ್ಳರಿದ್ದಾರೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬ್ಯಾಂಕ್‌ನಲ್ಲಿ ಹಣ ಪಡೆದು ಹೊರಬರುವ ಸಾರ್ವಜನಿಕರನ್ನು ಹಿಂಬಾಲಿಸಿ ಕಳ್ಳತನ ಮಾಡುವ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಲಕ್ಷ್ಮೇಶ್ವರ ಪೊಲೀಸರು ಎಚ್ಚೆತ್ತುಕೊಂಡಿದ್ದು, ಬ್ಯಾಂಕ್‌ಗಳು ಹಾಗೂ ಎಟಿಎಂ ಕೇಂದ್ರಗಳ ಭದ್ರತೆ ಬಿಗಿಗೊಳಿಸಲು ಸೂಚಿಸಿದ್ದಾರೆ.

ಪಟ್ಟಣ ಹಾಗೂ ತಾಲೂಕಿನ ವಿವಿಧೆಡೆ ಬ್ಯಾಂಕ್, ಎಟಿಎಂ ಮತ್ತು ಹಣಕಾಸು ಸಂಸ್ಥೆಗಳ ಸುತ್ತಮುತ್ತ ಕಳ್ಳತನ, ದರೋಡೆ ಹಾಗೂ ಸರಗಳ್ಳತನದ ಘಟನೆಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಬುಧವಾರ ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ರಾಷ್ಟ್ರೀಕೃತ, ಗ್ರಾಮೀಣ ಹಾಗೂ ಸಹಕಾರಿ ಬ್ಯಾಂಕ್‌ಗಳ ವ್ಯವಸ್ಥಾಪಕರ ಸಭೆ ನಡೆಯಿತು.

ಸಿಪಿಐ ಬಿ.ವಿ. ನ್ಯಾಮಗೌಡ ಹಾಗೂ ಪಿಎಸ್‌ಐ ಆನಂದ ಕ್ಯಾರಕಟ್ಟಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಬ್ಯಾಂಕ್‌ಗಳ ಭದ್ರತಾ ವ್ಯವಸ್ಥೆ, ಸಿಸಿಟಿವಿ ಕ್ಯಾಮೆರಾಗಳ ಕಾರ್ಯನಿರ್ವಹಣೆ ಹಾಗೂ ಸಾರ್ವಜನಿಕರ ಸುರಕ್ಷತೆ ಕುರಿತು ಚರ್ಚಿಸಲಾಯಿತು.

ಹಿರಿಯ ನಾಗರಿಕರು ಹಾಗೂ ಸಾರ್ವಜನಿಕರು ಬ್ಯಾಂಕ್‌ನಿಂದ ಹಣ ಪಡೆದು ಹೊರಬರುವಾಗ ಅವರನ್ನು ಗಮನಿಸಿ ಹಿಂಬಾಲಿಸುವ ಸಾಧ್ಯತೆ ಇರುವುದರಿಂದ ಬ್ಯಾಂಕ್ ಆಡಳಿತ ಮಂಡಳಿಗಳು ಹಾಗೂ ಸಿಬ್ಬಂದಿ ಹೆಚ್ಚಿನ ಎಚ್ಚರಿಕೆ ವಹಿಸಬೇಕು. ಯಾವುದೇ ರೀತಿಯ ಅಜಾಗರೂಕತೆಗೆ ಅವಕಾಶ ನೀಡಬಾರದು ಎಂದು ಸಿಪಿಐ ಬಿ.ವಿ. ನ್ಯಾಮಗೌಡ ಸೂಚಿಸಿದರು.

**ರಸ್ತೆ ಮೇಲೂ ಬೀಳಲಿ ಸಿಸಿಟಿವಿ ಕಣ್ಣು**

ಪ್ರತಿಯೊಂದು ಬ್ಯಾಂಕ್ ಹಾಗೂ ಎಟಿಎಂ ಕೇಂದ್ರದ ಒಳಾಂಗಣ ಮಾತ್ರವಲ್ಲದೆ, ಪ್ರವೇಶದ್ವಾರ, ಹೊರಭಾಗ ಹಾಗೂ ರಸ್ತೆ ಸ್ಪಷ್ಟವಾಗಿ ಕಾಣುವಂತೆ ಗುಣಮಟ್ಟದ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಬೇಕು. ಅಳವಡಿಸಿರುವ ಕ್ಯಾಮೆರಾಗಳು ನಿರಂತರವಾಗಿ ಕಾರ್ಯನಿರ್ವಹಿಸುತ್ತಿವೆಯೇ ಎಂಬುದನ್ನು ಬ್ಯಾಂಕ್ ಆಡಳಿತ ಮಂಡಳಿಗಳು ಖಚಿತ ಪಡಿಸಿಕೊಳ್ಳಬೇಕು ಎಂದು ಸೂಚಿಸಿದರು.

ಬ್ಯಾಂಕ್‌ಗಳ ಭದ್ರತಾ ಸಿಬ್ಬಂದಿ ಹಾಗೂ ವಾಹನ ನಿಲುಗಡೆ ಸ್ಥಳದ ಮೇಲ್ವಿಚಾರಕರು ಸದಾ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಬೇಕು. ಅಪರಿಚಿತ ವ್ಯಕ್ತಿಗಳು, ಅನುಮಾನಾಸ್ಪದ ವಾಹನಗಳು ಹಾಗೂ ಬ್ಯಾಂಕ್ ಸುತ್ತಮುತ್ತ ಅನುಮಾನಾಸ್ಪದವಾಗಿ ಓಡಾಡುವವರ ಚಲನವಲನದ ಮೇಲೆ ನಿಗಾ ಇರಿಸಬೇಕು. ಯಾವುದೇ ಅನುಮಾನ ಕಂಡುಬಂದರೆ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ಹೇಳಿದರು.

ಬ್ಯಾಂಕ್ ಸಿಬ್ಬಂದಿ ಸಾರ್ವಜನಿಕರಿಗೆ ಅಗತ್ಯ ಭದ್ರತಾ ಸಲಹೆಗಳನ್ನು ನೀಡಬೇಕು. ವಿಶೇಷವಾಗಿ ಹೆಚ್ಚಿನ ಮೊತ್ತದ ಹಣ ಪಡೆಯುವ ಹಿರಿಯ ನಾಗರಿಕರು ಹಾಗೂ ಒಂಟಿಯಾಗಿ ಬರುವವರ ಬಗ್ಗೆ ಹೆಚ್ಚಿನ ಗಮನಹರಿಸುವಂತೆ ಪೊಲೀಸ್ ಇಲಾಖೆ ಸೂಚಿಸಿದೆ.

# ಅಂಗನವಾಡಿ ಮಕ್ಕಳಿಗೆ ಸಿಹಿ ಹಂಚಿ ಮೋದಿ ಹುಟ್ಟುಹಬ್ಬ ಆಚರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರ ಮಂಡಲ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ 'ಅಂಗನ ಕಾ ಮಿಲನ' ಕಾರ್ಯಕ್ರಮವನ್ನು ಅಂಗನವಾಡಿ ಕೇಂದ್ರಗಳಲ್ಲಿ ಆಯೋಜಿಸಲಾಯಿತು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಹುಟ್ಟುಹಬ್ಬದ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ 304 ಅಂಗನವಾಡಿ ಮಕ್ಕಳಿಗೆ ಸಿಹಿ ವಿತರಿಸಿ, ಅಂಗನವಾಡಿ ಶಿಕ್ಷಕಿಯರು ಹಾಗೂ ಸಹಾಯಕರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಗರ ಮಂಡಲ ಮಹಿಳಾ ಮೋರ್ಚಾ ಅಧ್ಯಕ್ಷೆ ಸ್ವಾತಿ ಅಕ್ಕಿ ಮಾತನಾಡಿ, ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆ ಹಾಗೂ ದೇಶ ಸೇವೆಯಲ್ಲಿ 25 ವರ್ಷಗಳನ್ನು ಪೂರ್ಣಗೊಳಿಸಿರುವುದು ಹೆಮ್ಮೆಯ ಸಂಗತಿ. ದೇಶದ ಅಭಿವೃದ್ಧಿಗಾಗಿ ಅವರು ಸಲ್ಲಿಸುತ್ತಿರುವ ಸೇವೆ ಮುಂದುವರಿಯಲಿ ಹಾಗೂ ಅವರಿಗೆ ಉತ್ತಮ ಆರೋಗ್ಯ, ದೀರ್ಘಾಯುಷ್ಯ ದೊರೆಯಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ನಗರಸಭಾ ಸದಸ್ಯೆ ವಿದ್ಯಾವತಿ ಗಡಗಿ, ಬಿಜೆಪಿ ಪ್ರಮುಖ ಲಕ್ಷ್ಮಣ ದೊಡ್ಡಮನಿ, ಮಹಿಳಾ ಮೋರ್ಚಾ ಜಿಲ್ಲಾ ಉಪಾಧ್ಯಕ್ಷೆ ಪ್ರೀತಿ ಶಿವಪ್ಪನಮಠ, ನಗರ ಮಂಡಲ ಉಪಾಧ್ಯಕ್ಷೆ ಚನ್ನಮ್ಮ ಹುಳಕಣ್ಣವರ, ಪದ್ಮಿನಿ ಮುತ್ತಲದಿನ್ನಿ, ಕಾರ್ಯದರ್ಶಿ ಮೇಘನಾ ಕೊಟ್ಟೂರ, ನಗರ ಮಂಡಲ ಮಹಿಳಾ ಮೋರ್ಚಾ ಉಪಾಧ್ಯಕ್ಷೆ ಶ್ರೀದೇವಿ ಲಖ್ಮಾಪೂರ, ಪ್ರಧಾನ ಕಾರ್ಯದರ್ಶಿ ರೇಖಾ ಗೌಳಿ, ಕಾರ್ಯದರ್ಶಿ ನೇತ್ರಾ ಜೋಗಿನ ಸೇರಿದಂತೆ ಹಲವರು ಉಪಸ್ಥಿತ-ರಿದ್ದರು.

# ಎಸ್‌ಎಸ್‌ಎಲ್‌ಸಿ ಫಲಿತಾಂಶಕ್ಕೆ ಶಾಲೆ–ಮನೆ ಒಂದಾಗಿ ಶ್ರಮಿಸಲಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಎಸ್‌ಎಸ್‌ಎಲ್‌ಸಿ ಪರೀಕ್ಷೆ ವಿದ್ಯಾರ್ಥಿನಿಯರ ಶೈಕ್ಷಣಿಕ ಬದುಕಿನ ಮಹತ್ವದ ಘಟ್ಟವಾಗಿದ್ದು, ಉತ್ತಮ ಫಲಿತಾಂಶಕ್ಕೆ ಶಿಕ್ಷಕರ ಮಾರ್ಗದರ್ಶನದ ಜತೆಗೆ ಪಾಲಕರ ಸಹಕಾರವೂ ಅಗತ್ಯ ಎಂದು ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ಹೇಳಿದರು.

ಪಟ್ಟಣದ ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯಲ್ಲಿ 2026–27ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿನಿಯರ ಪಾಲಕರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಾಲೆಯಲ್ಲಿ ಫಲಿತಾಂಶ ಸುಧಾರಣೆಗೆ ವಿಶೇಷ ತರಗತಿಗಳು ಹಾಗೂ ವಿವಿಧ ಶೈಕ್ಷಣಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ. ವಿದ್ಯಾರ್ಥಿನಿಯರು ಪ್ರತಿದಿನ ಶಾಲೆಗೆ ಹಾಜರಾಗಿ, ಶಿಕ್ಷಕರು ನೀಡುವ ಗೃಹಪಾಠವನ್ನು ಪೂರ್ಣಗೊಳಿಸಬೇಕು. ಹಿಂದಿನ ಸಾಲಿನ ಪ್ರಶ್ನೆಪತ್ರಿಕೆಗಳು ಹಾಗೂ ಪರೀಕ್ಷಾ ಮಂಡಳಿಯ ಮಾದರಿ ಪ್ರಶ್ನೆಪತ್ರಿಕೆಗಳನ್ನು ಅಭ್ಯಾಸ ಮಾಡುವ ಮೂಲಕ ಪರೀಕ್ಷಾ ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಪರೀಕ್ಷಾ ಸಿದ್ಧತೆಯ ಸಂದರ್ಭದಲ್ಲಿ ಮನೆಯಲ್ಲಿ ಓದಲು ಶಾಂತ ವಾತಾವರಣ ಕಲ್ಪಿಸುವುದು, ಸಮಯಕ್ಕೆ ಸರಿಯಾಗಿ ಊಟ ಮತ್ತು ನಿದ್ರೆಗೆ ಆದ್ಯತೆ ನೀಡುವುದು ಹಾಗೂ ಮೊಬೈಲ್ ಮತ್ತು ದೂರದರ್ಶನ ಬಳಕೆಗೆ ಸೂಕ್ತ ನಿಯಂತ್ರಣ ವಹಿಸುವುದು ಅಗತ್ಯ ಎಂದು ತಿಳಿಸಿದರು.

ವಿದ್ಯಾರ್ಥಿನಿಯರ ಮೇಲೆ ಅತಿಯಾದ ಒತ್ತಡ ಹೇರದೆ, ಅವರ ಪ್ರಯತ್ನವನ್ನು ಗುರುತಿಸಿ ಆತ್ಮವಿಶ್ವಾಸ ತುಂಬಬೇಕು. ಅಂಕಗಳಿಗಿಂತ ಮಕ್ಕಳ ಭವಿಷ್ಯದ ಕನಸುಗಳಿಗೆ ಬೆಂಬಲ ನೀಡುವುದು ಪಾಲಕರ ಪ್ರಮುಖ ಜವಾಬ್ದಾರಿ ಎಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಸಭೆಯಲ್ಲಿ ವಿದ್ಯಾರ್ಥಿನಿಯರ ಶೈಕ್ಷಣಿಕ ಪ್ರಗತಿ, ಪರೀಕ್ಷಾ ಸಿದ್ಧತೆ, ವಿಶೇಷ ತರಗತಿಗಳ ಹಾಜರಾತಿ, ಗೃಹಪಾಠ ಹಾಗೂ ವಿಷಯವಾರು ಕಲಿಕೆಯ ಮಟ್ಟದ ಕುರಿತು ಚರ್ಚಿಸಲಾಯಿತು.

ಪಾಲಕರ ಪ್ರತಿನಿಧಿಗಳಾದ ಸುರೇಶ್ ಕಳಕಣ್ಣವರ, ಲಲಿತಾ ಸೋಮಗೊಂಡ, ಶಿಕ್ಷಕಿಯರಾದ ಎಸ್.ಎಫ್. ಧರ್ಮಾಯತ, ಆರ್.ಎಂ. ಗುಳಬಾಳ ಹಾಗೂ ಜ್ಯೋತಿ ಪೂಜಾರಿ ಉಪಸ್ಥಿತರಿದ್ದರು. ಶಿಕ್ಷಕ ಬಿ.ಡಿ. ಯರಗೊಪ್ಪ ಸ್ವಾಗತಿಸಿದರು. ಎ.ಟಿ. ಮಳ್ಳಳ್ಳಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಎಸ್. ಶಿವಮೂರ್ತಿ ನಿರೂಪಿಸಿದರು.

## ಕಸಾಪದಿಂದ ಇಂದು ದತ್ತಿ ಉಪನ್ಯಾಸ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಪೂಜ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಹಾಗೂ ಕಾಯಕಜೀವಿ ಸದಾನಂದ ಪಿಳ್ಳಿ ಅವರ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಅ. 3ರಂದು ಬೆಳಿಗ್ಗೆ 9 ಗಂಟೆಗೆ ನಗರದ ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದೆ.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಅಧ್ಯಕ್ಷತೆ ವಹಿಸುವರು. ಸಂಸ್ಕೃತಿ ಚಿಂತಕ ಎಸ್.ಎಸ್. ಹರ್ಲಾಪೂರ ಅವರು 'ಕನ್ನಡಕ್ಕೆ ಡಾ. ತೋಂಟದ ಸಿದ್ಧಲಿಂಗ ಶ್ರೀಗಳ ಕೊಡುಗೆ' ವಿಷಯ ಕುರಿತು ಉಪನ್ಯಾಸ ನೀಡುವರು. ಸದಾನಂದ ಪಿಳ್ಳಿ ಅವರ ಸಂಸ್ಮರಣೆಯನ್ನು ಡಿ.ಎಸ್. ಬಾಪುರಿ ನೆರವೇರಿಸುವರು. ಮಹಾವಿದ್ಯಾಲಯದ ಪ್ರಾಚಾರ್ಯ ಎಸ್.ಪಿ. ಗೌಳಿ ಹಾಗೂ ದತ್ತಿ ದಾನಿ ಸುರೇಖಾ ಸದಾನಂದ ಪಿಳ್ಳಿ ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು ಹಾಗೂ ಪರಿಷತ್ತಿನ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಕಸಾಪ ಕಾರ್ಯದರ್ಶಿಗಳಾದ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಡಿ.ಎಸ್. ಬಾಪುರಿ, ದತ್ತಪ್ರಸನ್ನ ಪಾಟೀಲ ಹಾಗೂ ಶ್ರೀಕಾಂತ ಬಡ್ಡೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಗದಗ: ತಾಲೂಕು ಮಟ್ಟದ ಬಾಲಕಿಯರ ಖೋ ಖೋ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ ಗದಗ ಎಸ್‌ಎಂಕೆ ನಗರದ ಸರ್ಕಾರಿ ಪ್ರೌಢಶಾಲೆಯ ಬಾಲಕಿಯರ ತಂಡ.

### ಗಾಂಧೀಜಿಯವರ ಶೈಕ್ಷಣಿಕ ಚಿಂತನೆಗಳು ಇಂದಿಗೂ ದಾರಿದೀಪ

# ಶಿಕ್ಷಣ ಅಕ್ಷರ ಕಲಿಸುವುದಷ್ಟೇ ಅಲ್ಲ, ಬದುಕು ಕಟ್ಟಬೇಕು



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಶಿಕ್ಷಣವು ಕೇವಲ ಅಕ್ಷರ ಜ್ಞಾನಕ್ಕೆ ಸೀಮಿತವಾಗದೆ ವ್ಯಕ್ತಿಯ ಕೈ, ಮನಸ್ಸು ಮತ್ತು ಹೃದಯವನ್ನು ಬೆಳೆಸುವಂತಿರಬೇಕು. ಸತ್ಯ, ಅಹಿಂಸೆ, ಶ್ರಮ, ಸ್ವಾವಲಂಬನೆ ಹಾಗೂ ನೈತಿಕ ಮೌಲ್ಯಗಳ ಮೂಲಕ ಸರ್ವಾಂಗೀಣ ವ್ಯಕ್ತಿತ್ವ ರೂಪಿಸುವುದೇ ನಿಜವಾದ ಶಿಕ್ಷಣ ಎಂಬ ಮಹಾತ್ಮ ಗಾಂಧೀಜಿಯವರ ಚಿಂತನೆ ಇಂದಿಗೂ ಪ್ರಸ್ತುತವಾಗಿದೆ ಎಂದು ಎಸ್.ಎ.ವಿ.ವಿ.ಪಿ. ಸಮಿತಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಶಿವಾನುಭವ ಮಂಟಪದಲ್ಲಿ ನಡೆದ 77ನೇ ಶಿವಾನುಭವ ಗೋಷ್ಠಿಯಲ್ಲಿ 'ಗಾಂಧೀಜಿಯವರ ಶೈಕ್ಷಣಿಕ ಚಿಂತನೆಗಳು' ವಿಷಯ ಕುರಿತು ಅವರು ಮಾತನಾಡಿದರು.

ಮಕ್ಕಳಿಗೆ ಮಾತೃಭಾಷೆಯಲ್ಲಿ ಶಿಕ್ಷಣ ನೀಡುವುದರ ಜತೆಗೆ ಆತ್ಮಸ್ಥೈರ್ಯ, ತಾಳ್ಮೆ, ಸಂಯಮ ಹಾಗೂ ಪರಸಹಿಷ್ಣುತೆಯಂತಹ ಗುಣಗಳನ್ನು ಬೆಳೆಸಬೇಕು. ಶಿಕ್ಷಕರು ಪಾಠ ಬೋಧಿಸುವವರಷ್ಟೇ ಅಲ್ಲದೆ ತಮ್ಮ ನಡೆ-ನುಡಿಯ ಮೂಲಕ ವಿದ್ಯಾರ್ಥಿಗಳಿಗೆ ಮಾದ-ರಿಯಾಗಬೇಕು ಎಂದರು.

ಗಾಂಧೀಜಿಯವರ ರಾಷ್ಟ್ರೀಯತೆಯ ಮೌಲ್ಯಗಳು ಹಾಗೂ ಬಸವಾದಿ ಶರಣರ ಕಾಯಕ, ದಾಸೋಹದ ತತ್ವಗಳು ಸಮಾಜ-ಕ್ಕೆ ದಾರಿದೀಪವಾಗಿವೆ. ಈ ಮೌಲ್ಯಗಳನ್ನು ಜನಜೀವನದಲ್ಲಿ ಅಳವಡಿಸಲು ಹಾಲಕೆರೆ ಅನ್ನದಾನೇಶ್ವರ ಮಹಾಸ್ವಾಮಿಗಳು ಶ್ರಮಿಸಿದ್ದರು. ಶೈಕ್ಷಣಿಕ ಸಂಸ್ಥೆ ಹಾಗೂ ಉಚಿತ ಪ್ರಸಾದ ನಿಲಯಗಳನ್ನು ಸ್ಥಾಪಿಸಿ ಎಲ್ಲ ವರ್ಗದ ಮಕ್ಕಳಿಗೂ ಶಿಕ್ಷಣ ದೊರೆಯುವಂತೆ ಮಾಡಿದ ಅವರ ಸೇವೆ ಸ್ಮರಣೀಯ ಎಂದು ಹೇಳಿದರು.

ಮಕ್ಕಳಿಗೆ ಪಠ್ಯ ಜ್ಞಾನದ ಜತೆಗೆ ಕರಕುಶಲ ಹಾಗೂ ಜೀವನ ಕೌಶಲ್ಯ ಕಲಿಸುವುದರಿಂದ ಶ್ರಮಕ್ಕೆ ಗೌರವ, ಸ್ವಾವಲಂಬನೆ ಮತ್ತು ಸ್ವಾಭಿಮಾನ ಬೆಳೆಸಬಹುದು. ಪ್ರೀತಿ, ಶಾಂತಿ, ಸದ್ಭಾವನೆ ಹಾಗೂ ಮಾನವೀಯತೆಯ ಮೌಲ್ಯಗಳನ್ನು ಬಾಲ್ಯದಲ್ಲೇ ಬೆಳೆಸಬೇಕು ಎಂದರು.

> ಶಿಕ್ಷಣವು ಜ್ಞಾನ ನೀಡುವುದರ ಜತೆಗೆ ಸತ್ಯ, ಅಹಿಂಸೆ, ಶ್ರಮ ಮತ್ತು ಸ್ವಾವಲಂಬನೆಯ ಮೌಲ್ಯಗಳನ್ನು ಬೆಳೆಸಿ ಜವಾಬ್ದಾ-ರಿಯುತ ನಾಗರಿಕರನ್ನು ರೂಪಿಸಬೇಕು.
>
> – ರವೀಂದ್ರನಾಥ ದೊಡ್ಡಮೇಟಿ

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅನ್ನದಾನೇಶ್ವರ ಮಹಾವಿದ್ಯಾಲಯದ ಪ್ರಾಚಾರ್ಯ ಕಲ್ಲಯ್ಯ ಹಿರೇಮಠ ವಹಿಸಿದ್ದರು. ಗುರುಲಿಂಗಮೂರ್ತಿ ಮಂಟಯ್ಯನಮಠ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ನಿವೃತ್ತ ಶಿಕ್ಷಕ ಎಂ.ಎ. ಹಿರೇವಡೆಯರ್, ಡಾ. ಲಿಂಗಯ್ಯ ಗೌರಿ, ಬಿ.ಎಚ್. ಬಂಡಿಹಾಳ, ಎಸ್.ಎನ್. ಹೂಲಗೇರಿ, ಡಾ. ಆರ್.ಕೆ. ಗಚ್ಚಿನಮಠ, ಎಫ್.ಎನ್. ಹುಡೇದ, ಪ್ರೊ. ಹಾದಿಮನಿ ಸೇರಿದಂತೆ ಗಣ್ಯರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸತ್ಯ–ಅಹಿಂಸೆಯ ಹಾದಿಯಲ್ಲಿ ಸಾಗೋಣ: ಡಾ. ನಾಯ್ಕರ್

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಆದರ್ಶ ಶಿಕ್ಷಣ ಸಮಿತಿಯ ಶ್ರೀ ವಿ.ಆರ್. ಕುಷ್ಟಗಿ ಮೆಮೋರಿಯಲ್ ಕಾಲೇಜ್ ಆಫ್ ಕಾಮರ್ಸ್ ಆವರಣದಲ್ಲಿ ಮಹಾತ್ಮ ಗಾಂಧೀಜಿಯವರ 157ನೇ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ವಿ.ಟಿ. ನಾಯ್ಕರ್ ಅವರು ಮಹಾತ್ಮ ಗಾಂಧೀಜಿಯವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ಗಾಂಧೀಜಿಯವರು ಸತ್ಯ ಮತ್ತು ಅಹಿಂಸೆಯ ತತ್ವಗಳನ್ನು ತಮ್ಮ ಜೀವನದ ಮುಖ್ಯ ಆದರ್ಶಗಳನ್ನಾಗಿ ಮಾಡಿಕೊಂಡಿದ್ದರು. ಬ್ರಿಟಿಷರ ಆಳ್ವಿಕೆಯಿಂದ ಭಾರತವನ್ನು ಸ್ವಾತಂತ್ರ್ಯಗೊಳಿಸಲು ಅಹಿಂಸಾತ್ಮಕ ಚಳವಳಿಗಳ ಮೂಲಕ ಜನರನ್ನು ಒಗ್ಗೂಡಿಸಿದರು. ಅಸಹಕಾರ ಚಳವಳಿ, ಉಪ್ಪಿನ ಸತ್ಯಾಗ್ರಹ ಹಾಗೂ ಭಾರತ ಬಿಟ್ಟು ತೊಲಗಿ ಚಳವಳಿಗಳಲ್ಲಿ ಪ್ರಮುಖ ಪಾತ್ರ ವಹಿಸಿದ್ದರು ಎಂದು ಹೇಳಿದರು.

ಗಾಂಧೀಜಿಯವರ ಸರಳ ಜೀವನ, ಶಿಸ್ತು, ಸತ್ಯನಿಷ್ಠೆ ಹಾಗೂ ದೇಶಪ್ರೇಮ ಇಂದಿಗೂ ಎಲ್ಲರಿಗೂ ಮಾದರಿಯಾಗಿದೆ. ಸ್ವಚ್ಛತೆ, ಸ್ವಾವಲಂಬನೆ, ಗ್ರಾಮೀಣ ಅಭಿವೃದ್ಧಿ ಹಾಗೂ ಸಾಮಾಜಿಕ ಸಮಾನತೆಗೆ ಅವರು ಹೆಚ್ಚಿನ ಮಹತ್ವ ನೀಡಿದ್ದರು. ಜಾತಿ, ಮತದ ಭೇದವಿಲ್ಲದೆ ಎಲ್ಲರೂ ಒಗ್ಗಟ್ಟಿನಿಂದ ಬದುಕಬೇಕು ಎಂಬುದು ಅವರ ಆಶಯವಾಗಿತ್ತು ಎಂದರು.

ಗಾಂಧೀಜಿಯವರ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ. ಸತ್ಯ ಮತ್ತು ಅಹಿಂಸೆಯ ಮಾರ್ಗದಲ್ಲಿ ಪ್ರತಿಯೊಬ್ಬರೂ ನಡೆಯುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಡಾ. ವಿ.ಟಿ. ನಾಯ್ಕರ್ ಕರೆ ನೀಡಿದರು.

ಐಕ್ಯೂಎಸಿ ಸಂಯೋಜಕಿ ಡಾ. ಸವಿತಾ ಬಂಡಾರ್ಕರ್, ಡಾ. ಸುನಿತಾ ನಾಯಕ್, ಡಾ. ಸುನಿಲ್ ನಾಗರಬೆಟ್ಟ ಹಾಗೂ ಮಹಾವಿದ್ಯಾಲಯದ ಶಿಕ್ಷಕರು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

### ಆಸ್ತಿ ದಾನದಿಂದ ಸಮಾಜಸೇವೆಯವರೆಗೆ ಅಪಾರ ಕೊಡುಗೆ

# ಕೂಡ್ಲಿಗಿ ಸರ್ಕಲ್‌ಗೆ 'ಶ್ರೀ ವೆಂಕೋಬಣ್ಣ ಶ್ರೇಷ್ಠಿ ವೃತ್ತ' ನಾಮಕರಣ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ದಾನಧರ್ಮ, ಶಿಕ್ಷಣ, ಆರೋಗ್ಯ ಹಾಗೂ ಧಾರ್ಮಿಕ ಕ್ಷೇತ್ರಗಳಿಗೆ ಅಪಾರ ಕೊಡುಗೆ ನೀಡಿದ ಗಂಗಾವತಿ ಶ್ರೀ ವೆಂಕೋಬಣ್ಣ ಶ್ರೇಷ್ಠಿಯವರ ಸೇವೆಯನ್ನು ಸ್ಮರಿಸುವ ನಿಟ್ಟಿನಲ್ಲಿ ಪಟ್ಟಣದ ಕೂಡ್ಲಿಗಿ ಸರ್ಕಲ್‌ಗೆ 'ಗಂಗಾವತಿ ಶ್ರೀ ವೆಂಕೋಬಣ್ಣ ಶ್ರೇಷ್ಠಿ ವೃತ್ತ' ಎಂದು ನಾಮಕರಣ ಮಾಡಲಾಯಿತು.

ವೃತ್ತವನ್ನು ಉದ್ಘಾಟಿಸಿ ಮಾತನಾಡಿದ ಶಾಸಕ ನೇಮಿರಾಜ್ ನಾಯ್ಕ್, ಹಗರಿಬೊಮ್ಮನಹಳ್ಳಿಯ ಅಭಿವೃದ್ಧಿಯಲ್ಲಿ ಶ್ರೀ ವೆಂಕೋಬಣ್ಣ ಶ್ರೇಷ್ಠಿಯವರ ಕೊಡುಗೆ ಮಹತ್ವದ್ದಾಗಿದೆ. ತಮ್ಮ ಸಂಪತ್ತು ಹಾಗೂ ಆಸ್ತಿಯನ್ನು ಸಮಾಜದ ಹಿತಕ್ಕಾಗಿ ಬಳಸಿದ ಅವರ ಸೇವೆ ಶ್ಲಾಘನೀಯವಾಗಿದೆ ಎಂದರು.

1954ರಲ್ಲಿ ನಾರಾಯಣದೇವರ ಕೆರೆ ಮುಳುಗಡೆಯಾದ ಬಳಿಕ ಹಗರಿಬೊಮ್ಮನಹಳ್ಳಿ ಪುನರ್ವಸತಿ ಕಂಡ ಸಂದರ್ಭದಲ್ಲಿ ಶ್ರೀ ವೆಂಕೋಬಣ್ಣ ಶ್ರೇಷ್ಠಿಯವರು ಪುನರ್ವಸತಿ ಸ್ಥಳಕ್ಕೆ ತಮ್ಮ ಸ್ವಂತ ಆಸ್ತಿಯನ್ನು ದಾನವಾಗಿ ನೀಡಿದ್ದರು. ಅಂದಿನ ಅವರ ನೆರವು ಪಟ್ಟಣದ ಮುಂದಿನ ಬೆಳವಣಿಗೆಗೆ ಪ್ರಮುಖ ಆಧಾರವಾಯಿತು.

ಸಾರ್ವಜನಿಕ ಆಸ್ಪತ್ರೆ, ಪಿಯು ಕಾಲೇಜು, ಪದವಿ ಕಾಲೇಜು ಸೇರಿದಂತೆ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಿಗೂ ಅವರು ನೆರವು ನೀಡಿದ್ದರು. ರಾಮನಗರದ ಶ್ರೀ ವೆಂಕಟೇಶ್ವರ ರಥ, ಬಂಡಿಹಳ್ಳಿ ಗುಡ್ಡದ ತಿಮ್ಮಪ್ಪನ ರಥೋತ್ಸವ ಸೇರಿದಂತೆ ಧಾರ್ಮಿಕ ಕಾರ್ಯಗಳಲ್ಲೂ ಅವರ ಕೊಡುಗೆ ಗಮನಾರ್ಹವಾಗಿತ್ತು.

ಕೆಚ್ಚಿನಬಂಡಿ ರಸ್ತೆಯಲ್ಲಿದ್ದ ಸುಮಾರು 6 ಎಕರೆ ಜಮೀನನ್ನು ಸಾರ್ವಜನಿಕ ರುದ್ರಭೂಮಿಗಾಗಿ ದಾನ ಮಾಡಿರುವುದು ಅವರ ಸಮಾಜಮುಖಿ ಚಿಂತನೆಗೆ ಸಾಕ್ಷಿಯಾಗಿದೆ. ತಿರುಪತಿ, ಮಂತ್ರಾಲಯ, ಹಂಪಿ, ಗೋಕರ್ಣ ಸೇರಿದಂತೆ ಹಲವು ಧಾರ್ಮಿಕ ಕ್ಷೇತ್ರಗಳಲ್ಲೂ ಧರ್ಮಛತ್ರಗಳನ್ನು ನಿರ್ಮಿಸಿ ಯಾತ್ರಿಕರ ಸೇವೆಗೆ ನೆರವಾಗಿದ್ದರು.

> ಹಗರಿಬೊಮ್ಮನಹಳ್ಳಿಯ ಅಭಿವೃದ್ಧಿಯಲ್ಲಿ ಶ್ರೀ ವೆಂಕೋಬಣ್ಣ ಶ್ರೇಷ್ಠಿಯವರ ಕೊಡುಗೆ ಅಮೋಘ, ಅನನ್ಯ. ತಮ್ಮ ಆಸ್ತಿ ಹಾಗೂ ಸಂಪತ್ತನ್ನು ಸಮಾಜದ ಹಿತಕ್ಕಾಗಿ ಬಳಸಿದ ಅವರ ಸೇವೆ ನಿಜಕ್ಕೂ ಮಾದ-ರಿಯಾಗಿದೆ. ಅವರ ಸೇವೆಯನ್ನು ಸ್ಮರಿಸುವ ಈ ಗೌರವ ಮುಂದಿನ ಪೀಳಿಗೆಗೂ ಅವರ ಆದರ್ಶವನ್ನು ಪರಿಚಯಿಸಲಿ.
>
> – ನೇಮಿರಾಜ್ ನಾಯ್ಕ್, ಶಾಸಕ

ಸುಕ್ಷೇತ್ರ ನಂದಿಪುರದ ಡಾ. ಮಹೇಶ್ವರ ಸ್ವಾಮಿ ಮಾತನಾಡಿ, ಹಗರಿಬೊಮ್ಮನಹಳ್ಳಿಯ ಸರ್ವತೋಮುಖ ಅಭಿವೃದ್ಧಿಗೆ ಶ್ರೀ ಗಂಗಾವತಿ ವೆಂಕೋಬಣ್ಣ ಶ್ರೇಷ್ಠಿಯವರು ಪ್ರಮುಖ ಕಾರಣ-ಕರ್ತರಾಗಿದ್ದಾರೆ. ಸಾರ್ವಜನಿಕ ಸೇವೆ, ಶಿಕ್ಷಣ, ಆರೋಗ್ಯ ಹಾಗೂ ಧಾರ್ಮಿಕ ಕ್ಷೇತ್ರಗಳಿಗೆ ಅವರು ನೀಡಿದ ಕೊಡುಗೆಗಳನ್ನು ಸಮಾಜ ಸದಾ ಸ್ಮರಿಸಲಿದೆ ಎಂದರು.

ಕಾರ್ಯಕ್ರಮದಲ್ಲಿ ಶ್ರೀ ವೆಂಕೋಬಣ್ಣ ಶ್ರೇಷ್ಠಿಯವರ ವಾರಸುದಾರ ಹಾಗೂ ಅಕ್ಷಯ ಪ್ರಿಂಟರ್ಸ್‌ನ ಗಂಗಾವತಿ ವಿಜಯಕುಮಾರ್ ಅವರು ಶ್ರೀಗಳಿಗೆ ಹಾಗೂ ಶಾಸಕ ನೇಮಿರಾಜ್ ನಾಯ್ಕ್ ಅವರಿಗೆ ಶಾಲು ಹೊದಿಸಿ ಸನ್ಮಾನಿಸಿ ಸ್ಮರಣಿಕೆ ಅರ್ಪಿಸಿದರು.

ರಾಮನಗರದ ಧರ್ಮಕರ್ತ ನಾಣ್ಯಾಪುರ ಕೃಷ್ಣಮೂರ್ತಿ, ಜೆಡಿಎಸ್ ಅಧ್ಯಕ್ಷ ವೈ. ಮಲ್ಲಿಕಾರ್ಜುನ, ಅಭಿಯಂತರ ಗಂಗಾವತಿ ವಿಜೇತ, ಉಪನ್ಯಾಸಕ ವಿನಯ ಸೇರಿದಂತೆ ಶ್ರೇಷ್ಠಿ ಸಮುದಾಯದ ಪ್ರಮುಖರು, ವಿವಿಧ ಕ್ಷೇತ್ರಗಳ ಗಣ್ಯರು, ರೈತರು, ವ್ಯಾಪಾರಸ್ಥರು ಹಾಗೂ ನಾಗರಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಸಣ್ಣ ಸುದ್ದಿಗಳು

### ಇಂದು ಕಣ್ಣಿನ ಪೊರೆಗೆ ಉಚಿತ ಚಿಕಿತ್ಸೆ

ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ ಹಾಗೂ ಇನ್ನರ್‌ವ್ಹೀಲ್ ಕ್ಲಬ್ ಆಫ್ ಗದಗ ಮಿಡ್‌ಟೌನ್ ವತಿಯಿಂದ 210ನೇ ಉಚಿತ ನೇತ್ರ ತಪಾಸಣೆ ಹಾಗೂ ಶಸ್ತ್ರಚಿಕಿತ್ಸಾ ಶಿಬಿರವನ್ನು ಗದಗದ ಜಿಲ್ಲಾ ಕ್ರೀಡಾಂಗಣದ ಸಮೀಪದ ರೋಟರಿ ಐ ಕೇರ್ ಸೆಂಟರ್‌ನಲ್ಲಿ ಆಯೋಜಿಸಲಾಗಿದೆ.

ದಿ. ವಿಶ್ವನಾಥ ವಿ. ಬುಳ್ಳಾ ಅವರ ಸ್ಮರಣಾರ್ಥ ಶ್ರೀ ನಿರಂಜನ ವಿ. ಬುಳ್ಳಾ, ದಿ. ಸೋಮಪ್ಪ ಎಸ್. ಡಂಬಳ ಹಾಗೂ ದಿ. ಶಕುಂತಲಾ ಎಸ್. ಡಂಬಳ ಅವರ ಸ್ಮರಣಾರ್ಥ ಶ್ರೀಮತಿ ಪ್ರೇಮಾ ಮೇಟಿ ಹಾಗೂ ಸಹೋದರರು ಮತ್ತು ಸಹೋದರಿಯರು, ದಿ. ಶ್ರೀ ಯಲ್ಲೇಶ ಜಿ. ಹುಕ್ಕೇರಿ ಅವರ ಸ್ಮರಣಾರ್ಥ ಶ್ರೀಮತಿ ಆಶಾ ವೈ. ಹುಕ್ಕೇರಿ ಹಾಗೂ ಮಕ್ಕಳು ಇವರ ಪ್ರಾಯೋಜಕತ್ವದಲ್ಲಿ ಶಿಬಿರ ನಡೆಯಲಿದೆ.

ಅ. 3ರಂದು ಸಂಜೆ 5 ಗಂಟೆಗೆ ನೇತ್ರ ತಪಾಸಣೆ ನಡೆಯಲಿದ್ದು, ತಪಾಸಣೆಯಲ್ಲಿ ಶಸ್ತ್ರಚಿಕಿತ್ಸೆ ಅಗತ್ಯವಿರುವ ರೋಗಿಗಳಿಗೆ ಅ. 4ರಂದು ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ ನಡೆಸಲಾಗುವುದು.

ತಪಾಸಣೆಗೆ ಆಗಮಿಸುವವರು ಆಧಾರ್ ಕಾರ್ಡ್‌ನ ಜೆರಾಕ್ಸ್ ಪ್ರತಿ ಕಡ್ಡಾಯವಾಗಿ ತರಬೇಕು. ರಕ್ತದೊತ್ತಡ ಹಾಗೂ ಸಕ್ಕರೆ ಕಾಯಿಲೆ ನಿಯಂತ್ರಣದಲ್ಲಿಲ್ಲದಿದ್ದರೆ ಆರೋಗ್ಯ ಸ್ಥಿತಿ ಸುಧಾರಿಸುವವರೆಗೆ ಶಸ್ತ್ರಚಿಕಿತ್ಸೆ ನಡೆಸಲಾಗುವುದಿಲ್ಲ ಎಂದು ಸಂಸ್ಥೆ ತಿಳಿಸಿದೆ.

ಕಣ್ಣಿನ ಪೊರೆ ಸಮಸ್ಯೆ ಇರುವವರು ರೋಟರಿ ಐ ಕೇರ್ ಸೆಂಟರ್‌ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವಂತೆ ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ ಅಧ್ಯಕ್ಷ ರೋ. ಇಂ. ಶ್ರೀಧರ ಎನ್. ಸುಲ್ತಾನಪೂರ, ಕಾರ್ಯದರ್ಶಿ ರೋ. ಇಂ. ಬಾಲಕೃಷ್ಣ ಕಾಮತ, ಐ ಕೇರ್ ಸೆಂಟರ್ ಚೇರ್ಮನ್ ರೋ. ಡಾ. ಶೇಖರ ಡಿ. ಸಜ್ಜನರ ಹಾಗೂ ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ ಅಧ್ಯಕ್ಷೆ ಶ್ರೀಮತಿ ಮಂಜುಳಾ ಅಕ್ಕಿ ಮನವಿ ಮಾಡಿದ್ದಾರೆ.

### ಜೆ.ಎಚ್. ಪಟೇಲ್ ಜನಪರ ರಾಜಕಾರಣ ಇಂದಿಗೂ ಪ್ರಸ್ತುತ



ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ಮಾಜಿ ಮುಖ್ಯಮಂತ್ರಿ ಹಾಗೂ ಗದಗ ಜಿಲ್ಲೆಯ ರಚನೆಗೆ ಪ್ರಮುಖ ಕಾರಣಕರ್ತರಾದ ಜೆ.ಎಚ್. ಪಟೇಲ್ ಅವರ 96ನೇ ಜನ್ಮದಿನದ ಅಂಗವಾಗಿ ಗದಗ ಜಿಲ್ಲಾ ವಿಕಾಸ ವೇದಿಕೆ ವತಿಯಿಂದ ಸವಿ ನೆನಪು ಕಾರ್ಯಕ್ರಮ ಹಾಗೂ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ಮಾತನಾಡಿ, ಇಂದಿನ ರಾಜಕೀಯ ಸಂದರ್ಭದಲ್ಲಿ ಅಭಿವೃದ್ಧಿ ಹಾಗೂ ಜನಪರ ಕಾರ್ಯಗಳಿಗೆ ಆದ್ಯತೆ ನೀಡುವ ನಾಯಕತ್ವದ ಅಗತ್ಯವಿದೆ. ಜೆ.ಎಚ್. ಪಟೇಲ್ ಅವರು ಅಭಿವೃದ್ಧಿಪರ ಚಿಂತನೆಯೊಂದಿಗೆ ಜನರಿಗೆ ಹತ್ತಿರವಾಗಿದ್ದ ನಾಯಕರು. ಅವರ ಜನಪರ ಚಿಂತನೆ ಹಾಗೂ ಅಭಿವೃದ್ಧಿ ದೃಷ್ಟಿಕೋನ ಇಂದಿಗೂ ಪ್ರಸ್ತುತವಾಗಿದೆ ಎಂದರು.

ವಿದ್ಯಾರ್ಥಿಗಳು ಶಿಕ್ಷಣ ಹಾಗೂ ಕಲಿಕೆಗೆ ಹೆಚ್ಚಿನ ಆದ್ಯತೆ ನೀಡಿ ಜ್ಞಾನ ಸಂಪಾದಿಸಬೇಕು. ಜ್ಞಾನದಿಂದ ಉತ್ತಮ ಸಮಾಜ ನಿರ್ಮಾಣದ ಜೊತೆಗೆ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಜಗುರು ವಸಂತ ವಡ್ಡರ್, ಗಣೇಶ ನಾಕೋಡ್, ವೆಂಕಟೇಶ ಕಬಾಡಿ, ಎಸ್.ಎಸ್. ಪುರಾಣಿಕಮಠ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

### ಅಬ್ಬಿಗೇರಿಯಲ್ಲಿಂದು ನೂತನ ಮಹಾರಥೋತ್ಸವ

ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಸಮೀಪದ ಅಬ್ಬಿಗೇರಿ ಹಿರೇಮಠದಲ್ಲಿ ನೂತನ ಶ್ರೀ ಜಗದ್ಗುರು ರೇಣುಕಾಚಾರ್ಯರ ಮಹಾರಥೋತ್ಸವದ ಲೋಕಾರ್ಪಣೆ, ಲಿಂ. ಸೋಮಶೇಖರ ಶಿವಾಚಾರ್ಯರ 6ನೇ ವರ್ಷದ ಪುಣ್ಯಸ್ಮರಣೋತ್ಸವ ಹಾಗೂ ಜನಜಾಗೃತಿ ಧರ್ಮ ಸಮಾರಂಭ ಅ.3ರಂದು ನಡೆಯಲಿದೆ ಎಂದು ಶ್ರೀಮಠ ಪ್ರಕಟಣೆಯಲ್ಲಿ ತಿಳಿಸಿದೆ.

ಅಂದು ಬೆಳಗ್ಗೆ 5 ಗಂಟೆಗೆ ಶ್ರೀ ಜಗದ್ಗುರು ರೇಣುಕಾಚಾರ್ಯರ ಮೂರ್ತಿ ಸೇರಿದಂತೆ ವಿವಿಧ ಶ್ರೀಗಳ ಗದ್ದುಗೆಗಳಿಗೆ ಮಹಾರುದ್ರಾಭಿಷೇಕ, ಮಹಾಮಂಗಳಾರತಿ ಹಾಗೂ ಪ್ರಸಾದ ವಿನಿಯೋಗ ನಡೆಯಲಿದೆ. ಮಾಹೇಶ್ವರ ವಟುಗಳಿಗೆ ಅಯ್ಯಾಚಾರ ಮತ್ತು ಲಿಂಗದೀಕ್ಷೆ ನೆರವೇರಲಿದೆ.

ಬೆಳಗ್ಗೆ 8 ಗಂಟೆಗೆ ಶ್ರೀ ಜಗದ್ಗುರು ರೇಣುಕಾಚಾರ್ಯರು ಹಾಗೂ ಚಂದ್ರಶೇಖರ ಶಿವಾಚಾರ್ಯರ ಉತ್ಸವ ಮೂರ್ತಿಗಳೊಂದಿಗೆ ನೂತನ ರಥದ ಕಳಸ ಹಾಗೂ ರಥದ ಹಗ್ಗದ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆಯಲಿದೆ. ಬೆಳಗ್ಗೆ 11 ಗಂಟೆಗೆ ನೂತನ ಮಹಾರಥೋತ್ಸವದ ಲೋಕಾರ್ಪಣೆ ಹಾಗೂ ಜನಜಾಗೃತಿ ಧರ್ಮ ಸಭೆ ನಡೆಯಲಿದ್ದು, ರಂಭಾಪುರಿ ಜಗದ್ಗುರು ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ಶಿವಾಚಾರ್ಯರು ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ವಿವಿಧ ಮಠಾಧೀಶರು ಸಾನ್ನಿಧ್ಯ ವಹಿಸಲಿದ್ದಾರೆ. ಸಿದ್ದರಬೆಟ್ಟ-ಅಬ್ಬಿಗೇರಿ ಹಿರೇಮಠದ ವೀರಭದ್ರ ಶಿವಾಚಾರ್ಯರು ನುಡಿನಮನ ಸಲ್ಲಿಸಲಿದ್ದಾರೆ.

ಸಭಾಧ್ಯಕ್ಷ ಜಿ.ಎಸ್. ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದು, ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ಕಳಕಪ್ಪ ಬಂಡಿ ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

### ಹೂಳು, ಮುಳ್ಳುಕಂಟಿಯಿಂದ ನೀರಿನ ಹರಿವಿಗೆ ತಡೆ | ಸಂಕಷ್ಟದಲ್ಲಿ ರೈತ ಸಮುದಾಯ

# ಸ್ವಚ್ಛತೆಗೆ ಕಾಯುತ್ತಿರುವ ಕದಡಿ ಹಳ್ಳಗಳು

ವಿಜಯಸಾಕ್ಷಿ ಸುದ್ದಿ, ಗದಗ



ತಾಲೂಕಿನ ಕದಡಿ ಗ್ರಾಮದ ಸಮೀಪದ ಹಿರೇಹಳ್ಳ, ಹಾಲಿಹಳ್ಳ ಸೇರಿದಂತೆ ಹಲವು ಹಳ್ಳಗಳು ಹೂಳು, ಮುಳ್ಳುಕಂಟಿ ಹಾಗೂ ಗಿಡಗಂಟಿಗಳಿಂದ ಮುಚ್ಚಿಕೊಂಡಿದ್ದು, ಸ್ವಚ್ಛತೆಗಾಗಿ ಕಾಯುತ್ತಿವೆ. ಹಳ್ಳಗಳಲ್ಲಿ ನೀರಿನ ಹರಿವು ಕುಂಠಿತಗೊಂಡಿರುವ ಪರಿಣಾಮ ಮಳೆಗಾಲದಲ್ಲಿ ನೀರು ಅಕ್ಕಪಕ್ಕದ ಕೃಷಿ ಜಮೀನುಗಳಿಗೆ ನುಗ್ಗಿ ಬೆಳೆ ಹಾನಿಯಾಗುವುದರ ಜತೆಗೆ ಫಲವತ್ತಾದ ಮಣ್ಣು ಕೊಚ್ಚಿಕೊಂಡು ಹೋಗುತ್ತಿದೆ ಎಂದು ರೈತರು ತಿಳಿಸಿದ್ದಾರೆ.

ಕದಡಿ ಗ್ರಾಮದ ಕೂಗಳತೆಯ ದೂರದಲ್ಲಿರುವ ಹಳ್ಳದಲ್ಲಿ ಜಾಲಿಕಂಟಿ ಮತ್ತು ಹುಲ್ಲು ಬೆಳೆದಿರುವುದರಿಂದ ನೀರು ಸರಾಗವಾಗಿ ಹರಿಯುತ್ತಿಲ್ಲ. ಮಳೆಗಾಲದಲ್ಲಿ ಹಳ್ಳ ತುಂಬಿ ಹರಿದಾಗ ಗ್ರಾಮದೊಳಗೂ ನೀರು ನುಗ್ಗಿ ಆಸ್ತಿ-ಪಾಸ್ತಿಗೆ ಹಾನಿಯಾದ ಸಂದರ್ಭಗಳಿವೆ. ಹಳ್ಳದ ನೀರು ಹೊಲಗಳಿಗೆ ನುಗ್ಗುವುದರಿಂದ ಬೆಳೆ ನಷ್ಟದ ಜತೆಗೆ ಜಮೀನಿನ ಫಲವತ್ತತೆಯ ಮೇಲೂ ಪರಿಣಾಮ ಬೀರುತ್ತಿದೆ ಎಂದು ಗ್ರಾಮಸ್ಥರು ಹೇಳಿದ್ದಾರೆ.

ಹಳ್ಳಗಳಲ್ಲಿ ಮುಳ್ಳುಕಂಟಿಗಳು ಬೆಳೆದಿರುವುದರಿಂದ ಮಹಿಳೆಯರಿಗೆ ಬಟ್ಟೆ ತೊಳೆಯಲು ಹಾಗೂ ಜಾನುವಾರುಗಳಿಗೆ ನೀರು ಕುಡಿಸಲು ತೊಂದರೆಯಾಗುತ್ತಿದೆ. ಬೇಸಿಗೆಯಲ್ಲಿ ಅಲ್ಪ ಪ್ರಮಾಣದ ನೀರು ಉಳಿದಿದ್ದರೂ ಹೂಳು ಮತ್ತು ಗಿಡಗಂಟಿಗಳಿಂದ ಜಾನುವಾರುಗಳು ನೀರಿನ ಬಳಿಗೆ ತೆರಳಲು ಕಷ್ಟವಾಗುತ್ತಿದೆ.

ಹಳ್ಳದ ಸುತ್ತಮುತ್ತ ಕಸ, ಮಲಮೂತ್ರ ಹಾಗೂ ತ್ಯಾಜ್ಯ ಎಸೆಯುತ್ತಿರುವುದರಿಂದ ದುರ್ವಾಸನೆ ಬೀರುತ್ತಿದ್ದು, ಕ್ರಿಮಿಕೀಟಗಳ ಹಾವಳಿಯೂ ಹೆಚ್ಚಾಗಿದೆ. ಇದರಿಂದ ಸಮೀಪದ ಕೋಳಿ ಪೇಟೆ ನಿವಾಸಿಗಳಲ್ಲಿ ಸಾಂಕ್ರಾಮಿಕ ರೋಗಗಳ ಭೀತಿಯೂ ಮೂಡಿದೆ. ಗಿಡಗಂಟಿಗಳು ದಟ್ಟವಾಗಿ ಬೆಳೆದಿರುವುದರಿಂದ ಹಳ್ಳದ ಪ್ರದೇಶ ಅನೈತಿಕ ಚಟುವಟಿಕೆಗಳಿಗೆ ತಾಣವಾಗುತ್ತಿದೆ ಎಂಬ ಆರೋಪವೂ ಕೇಳಿಬಂದಿದೆ. ಇದರಿಂದ ರೈತ ಮಹಿಳೆಯರು ಕೃಷಿ ಚಟುವಟಿಕೆಗೆ ತೆರಳಲು ಆತಂಕಪಡುವಂತಾಗಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಹಳ್ಳದ ಹೂಳು ತೆಗೆಯಲು ಹಾಗೂ ಮುಳ್ಳುಕಂಟಿಗಳನ್ನು ತೆರವುಗೊಳಿಸಲು ಅವಕಾಶವಿದ್ದರೂ ಕಾಮಗಾರಿ ಕೈಗೊಳ್ಳಲಾಗಿಲ್ಲ ಎಂಬುದು ಗ್ರಾಮಸ್ಥರ ಅಳಲು. ಹಳ್ಳ ಸ್ವಚ್ಛಗೊಳಿಸಿದರೆ ಮಳೆನೀರು ಸಂಗ್ರಹವಾಗಿ ಅಂತರ್ಜಲ ಮಟ್ಟ ಹೆಚ್ಚುವುದರ ಜತೆಗೆ ಸುತ್ತಲಿನ ಜಮೀನುಗಳಿಗೂ ಅನುಕೂಲವಾಗಲಿದೆ ಎಂದು ಅವರು ಹೇಳಿದ್ದಾರೆ.

ಕದಡಿ-ಗಾವರವಾಡ ಮಧ್ಯಭಾಗದ ಹಳ್ಳದ ದಡದಲ್ಲಿರುವ ಶ್ರೀ ಮಂಜುನಾಥ ದೇವಸ್ಥಾನದ ಸುತ್ತಲೂ ಹೊಲಸು ತುಂಬಿಕೊಂಡಿದ್ದು, ನಿತ್ಯ ದೇವಾಲಯಕ್ಕೆ ಆಗಮಿಸುವ ಭಕ್ತರಿಗೂ ತೊಂದರೆಯಾಗುತ್ತಿದೆ.

ಹಳ್ಳಗಳ ಸ್ವಚ್ಛತೆಗೆ ಶೀಘ್ರ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ರೈತ ಸಂಘಟನೆ ಹಾಗೂ ಸ್ಥಳೀಯ ರೈತರೊಂದಿಗೆ ಪ್ರತಿಭಟನೆ ನಡೆಸುವುದು ಅನಿವಾರ್ಯವಾಗಲಿದೆ ಎಂದು ಸಿದ್ದಲಿಂಗೇಶ, ವೀರೇಶ, ಶೇಕಣ್ಣ, ದೇವಪ್ಪ ಹಾಗೂ ಮಹೇಶ ತಿಳಿಸಿದ್ದಾರೆ.

> ಹಳ್ಳಗಳು ಗ್ರಾಮೀಣ ಬದುಕಿನ ಪ್ರಮುಖ ಜಲಮೂಲಗಳು. ಹೂಳು ಹಾಗೂ ಮುಳ್ಳುಕಂಟಿ ತೆರವುಗೊಳಿಸಿದರೆ ಮಳೆನೀರು ಸರಾಗವಾಗಿ ಹರಿದು ಸಂಗ್ರಹವಾಗಲಿದೆ. ಇದರಿಂದ ಅಂತರ್ಜಲ ಹೆಚ್ಚುವುದರ ಜತೆಗೆ ರೈತರ ಜಮೀನಿಗೂ ಅನುಕೂಲವಾಗುತ್ತದೆ. ಹಳ್ಳದ ನೀರು ಹೊಲಗಳಿಗೆ ನುಗ್ಗಿ ಫಲವತ್ತಾದ ಮಣ್ಣು ಕೊಚ್ಚಿಕೊಂಡು ಹೋಗುವುದನ್ನು ತಡೆಯಲು ಸಂಬಂಧಿಸಿದವರು ಕೂಡಲೇ ಕ್ರಮ ಕೈಗೊಳ್ಳಬೇಕು..
>
> – ವಿಕ್ರಂ ಗೊಜನೂರು, ಗ್ರಾಮಸ್ಥ

### ಆರಂಭದಲ್ಲೇ ಪತ್ತೆ ಹಚ್ಚಿದರೆ ಗುಣಮುಖ ಸಾಧ್ಯತೆ ಹೆಚ್ಚು: ಡಾ. ಶಿವನಗೌಡ

# ಮಕ್ಕಳ ಕ್ಯಾನ್ಸರ್‌ಗೆ ಎಚ್ಚರ



ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳಲ್ಲಿ ಕ್ಯಾನ್ಸರ್ ಕುರಿತು ಪೋಷಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ವತಿಯಿಂದ ನಗರದ ಸೌಖ್ಯದಾ ಆಸ್ಪತ್ರೆಯಲ್ಲಿ ಜಾಗೃತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಮಕ್ಕಳ ತಜ್ಞ ಡಾ. ಶಿವನಗೌಡ ಜೋಳದರಾಶಿ ಮಾತನಾಡಿ, ವೈದ್ಯರ ಕರ್ತವ್ಯ ರೋಗಕ್ಕೆ ಚಿಕಿತ್ಸೆ ನೀಡುವುದಕ್ಕೆ ಮಾತ್ರ ಸೀಮಿತವಾಗಬಾರದು. ರೋಗದ ಕುರಿತು ಜನರಲ್ಲಿ ಅರಿವು ಮೂಡಿಸುವುದೂ ವೈದ್ಯರ ಜವಾಬ್ದಾರಿಯಾಗಿದೆ ಎಂದರು.

ಮಕ್ಕಳಲ್ಲಿ ಕ್ಯಾನ್ಸರ್ ಸಾಮಾನ್ಯ ಕಾಯಿಲೆಯಲ್ಲ. ಆದರೆ ಆರಂಭಿಕ ಹಂತದಲ್ಲಿಯೇ ರೋಗವನ್ನು ಗುರುತಿಸಿ, ಸೂಕ್ತ ಸಮಯದಲ್ಲಿ ಚಿಕಿತ್ಸೆ ನೀಡಿದರೆ ಅನೇಕ ಮಕ್ಕಳನ್ನು ಸಂಪೂರ್ಣವಾಗಿ ಗುಣಪಡಿಸಲು ಸಾಧ್ಯವಿದೆ ಎಂದು ತಿಳಿಸಿದರು.

ಮಕ್ಕಳ ಆರೋಗ್ಯದಲ್ಲಿ ಕಂಡುಬರುವ ಸಣ್ಣಪುಟ್ಟ ಬದಲಾವಣೆಗಳನ್ನೂ ಪೋಷಕರು ನಿರ್ಲಕ್ಷಿಸಬಾರದು. ಅಸಹಜ ಲಕ್ಷಣಗಳು ಕಂಡುಬಂದರೆ ತಡಮಾಡದೆ ವೈದ್ಯರನ್ನು ಸಂಪರ್ಕಿಸಿ ಅಗತ್ಯ ಪರೀಕ್ಷೆ ಮಾಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕ್ಯಾನ್ಸರ್‌ನಂತಹ ಕಾಯಿಲೆ ಎದುರಾದಾಗ ಮಕ್ಕಳಿಗೆ ವೈದ್ಯಕೀಯ ಚಿಕಿತ್ಸೆಯ ಜೊತೆಗೆ ಪೋಷಕರ ಪ್ರೀತಿ, ಧೈರ್ಯ ಹಾಗೂ ಸಮಾಜದ ಬೆಂಬಲವೂ ಅಗತ್ಯವಾಗಿದೆ. ಮಕ್ಕಳ ಆರೋಗ್ಯದ ಬಗ್ಗೆ ಎಲ್ಲರೂ ಜಾಗರೂಕರಾಗಬೇಕು ಎಂದು ಕರೆ ನೀಡಿದರು.

ಕ್ಲಬ್ ಅಧ್ಯಕ್ಷ ಪ್ರವೀಣ ವಾರಕರ, ಕಾರ್ಯದರ್ಶಿ ಲಿಂಗರಾಜ ತೋಟದ, ಮಂಜುನಾಥ ವೀರಲಿಂಗಯ್ಯನಮಠ, ರಮೇಶ ಶಿಗ್ಲಿ, ರತನ ದೇಸಾಯಿ, ಸಂತೋಷ ಕಬಾಡರ, ಅಮೃತಾ ವಾರಕರ, ಅಪರ್ಣಾ ತೋಟದ, ವೀಣಾ ಸುಲಾಖೆ ಸೇರಿದಂತೆ ಕ್ಲಬ್ ಸದಸ್ಯರು ಹಾಗೂ ಆಸ್ಪತ್ರೆಯ ಸಿಬ್ಬಂದಿ ಉಪಸ್ಥಿತರಿದ್ದರು.

### ಮೂರು ದಿನಗಳ ವಜ್ರ ಮಹೋತ್ಸವಕ್ಕೆ ಗದಗದ ವ್ಯಾಪಾರಸ್ಥರಿಗೆ ಆಹ್ವಾನ

# 60ರ ಸಂಭ್ರಮಕ್ಕೆ ಕಲಬುರಗಿ ಚೇಂಬರ್ ಸಜ್ಜು



ವಿಜಯಸಾಕ್ಷಿ ಸುದ್ದಿ, ಗದಗ

ಕಲ್ಯಾಣ ಕರ್ನಾಟಕದ ವಾಣಿಜ್ಯೋದ್ಯಮ ಕ್ಷೇತ್ರದ ಪ್ರತಿಷ್ಠಿತ ಸಂಸ್ಥೆಯಾದ ಕಲ್ಯಾಣ ಕರ್ನಾಟಕ ಚೇಂಬರ್ ಆಫ್ ಕಾಮರ್ಸ್ ಇಂಡಸ್ಟ್ರೀಸ್ ತನ್ನ 60 ವರ್ಷಗಳ ಪಯಣದ ಸಂಭ್ರಮವಾಗಿ ವಜ್ರ ಮಹೋತ್ಸವ ಆಚರಣೆಗೆ ಸಜ್ಜಾಗಿದೆ.

ನ. 28ರಿಂದ 30ರವರೆಗೆ ಮೂರು ದಿನಗಳ ಕಾಲ ಕಲಬುರಗಿಯ ಶೇಡಂ ರಸ್ತೆಯ ಎಂ.ಆರ್.ಎಂ.ಸಿ. ಕಾಲೇಜು ಆವರಣದಲ್ಲಿ ಬೃಹತ್ ಕಾರ್ಯಕ್ರಮ ನಡೆಯಲಿದ್ದು, ಈ ಹಿನ್ನೆಲೆಯಲ್ಲಿ ಕಲಬುರಗಿ ಚೇಂಬರ್ ಪದಾಧಿಕಾರಿಗಳು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಸಭಾಂಗಣದಲ್ಲಿ ಗುರುವಾರ ಸಭೆ ನಡೆಸಿ ಗದಗದ ವ್ಯಾಪಾರಸ್ಥರಿಗೆ ಆಹ್ವಾನ ನೀಡಿದರು.

ಕಲ್ಯಾಣ ಕರ್ನಾಟಕ ಚೇಂಬರ್ ಅಧ್ಯಕ್ಷ ಶರಣಬಸಪ್ಪ ಎಂ. ಪಪ್ಪಾ ಅವರು ಗದಗ ಚೇಂಬರ್ ಪದಾಧಿಕಾರಿಗಳಿಗೆ ಆಮಂತ್ರಣ ಪತ್ರಿಕೆ ಹಾಗೂ ಪ್ರಚಾರ ಸಾಮಗ್ರಿಗಳನ್ನು ಹಸ್ತಾಂತರಿಸಿ, ಜಿಲ್ಲೆಯ ಹೆಚ್ಚಿನ ಸಂಖ್ಯೆಯ ವ್ಯಾಪಾರಸ್ಥರು ವಜ್ರ ಮಹೋತ್ಸವದಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ವಜ್ರ ಮಹೋತ್ಸವ ಕೇವಲ ಸಂಭ್ರಮಾಚರಣೆಗೆ ಸೀಮಿತವಾಗದೆ, ವಾಣಿಜ್ಯ ಮತ್ತು ಕೈಗಾರಿಕಾ ಕ್ಷೇತ್ರದ ಹಿನ್ನೋಟ ಹಾಗೂ ಮುನ್ನೋಟದ ಕುರಿತು ಚಿಂತನ-ಮಂಥನ ನಡೆಸುವ ವೇದಿಕೆಯಾಗಲಿದೆ. ಹೊಸ ಉದ್ಯಮಿಗಳಿಗೆ ಮಾರ್ಗದರ್ಶನ, ಮಾರುಕಟ್ಟೆ ತಂತ್ರಗಳು, ವ್ಯಾಪಾರಸ್ಥರ ಸಮಸ್ಯೆಗಳು, ಹೊಸ ಕಾಯ್ದೆ-ಕಾನೂನುಗಳ ಅರಿವು ಹಾಗೂ ಯಶಸ್ವಿ ಉದ್ಯಮಿಯಾಗುವ ಮಾರ್ಗಗಳ ಕುರಿತು ತಜ್ಞರಿಂದ ಚರ್ಚೆಗಳು ನಡೆಯಲಿವೆ ಎಂದು ಶರಣಬಸಪ್ಪ ಎಂ. ಪಪ್ಪಾ ವಿವರಿಸಿದರು.

ಬೃಹತ್ ಮತ್ತು ಸಣ್ಣ ಕೈಗಾರಿಕೆಗಳ ಮುಖ್ಯಸ್ಥರು ಭಾಗವಹಿಸಲಿದ್ದು, ಐಟಿ-ಬಿಟಿ ಕಂಪನಿಗಳ ಸಹಯೋಗದಲ್ಲಿ ಉದ್ಯೋಗ ಮೇಳವೂ ನಡೆಯಲಿದೆ. ಕಾರ್ಯಕ್ರಮವನ್ನು ಸ್ಮರಣೀಯವಾಗಿಸಲು ವಿವಿಧ ಸಮಿತಿ ಹಾಗೂ ಉಪಸಮಿತಿಗಳನ್ನು ರಚಿಸಿ ಸಿದ್ಧತೆ ಕೈಗೊಳ್ಳಲಾಗಿದೆ ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಗದಗ ಚೇಂಬರ್ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಮಾತನಾಡಿ, ಗದಗ ಚೇಂಬರ್ ಕೂಡ ರಜತ ಮಹೋತ್ಸವ ಆಚರಿಸಿಕೊಂಡಿರುವುದನ್ನು ಸ್ಮರಿಸಿದರು. ಕಲಬುರಗಿ ಚೇಂಬರ್‌ನ ವಜ್ರ ಮಹೋತ್ಸವ ಯಶಸ್ವಿಯಾಗಲಿ ಎಂದು ಶುಭ ಹಾರೈಸಿ, ಗದಗ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ವ್ಯಾಪಾರಸ್ಥರು ಭಾಗವಹಿಸುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ಚೇಂಬರ್ ಅಧ್ಯಕ್ಷ ಶರಣಬಸಪ್ಪ ಎಂ. ಪಪ್ಪಾ, ಜಂಟಿ ಕಾರ್ಯದರ್ಶಿ ಗಿರೀಶ ಆಣೆಕಲ್ ಹಾಗೂ ವ್ಯವಸ್ಥಾಪಕ ಸಮಿತಿ ಸದಸ್ಯ ರವಿಶಂಕರ್ ಜಮದರಖಾನಿ ಅವರನ್ನು ಗದಗ ಚೇಂಬರ್ ವತಿಯಿಂದ ಉಡುಗೊರೆ ನೀಡಿ ಸನ್ಮಾನಿಸಲಾಯಿತು.

ಗದಗ ಚೇಂಬರ್ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಶಿಕಟ್ಟಿ, ಆನಂದ ಪೋತ್ನೀಸ್, ಚಂದ್ರು ಬಾಳಿಹಳ್ಳಿಮಠ, ಮೋಹನ ಕೋಟಿ, ಮಧುಸೂದನ ಪುಣೇಕರ, ಸಿದ್ರಾಮಪ್ಪ ಉಮಚಗಿ, ಅಶೋಕ ಸಂಕಣ್ಣವರ, ರಾಘವೇಂದ್ರ ಕಾಲವಾಡ, ಜಯದೇವ ಮೆಣಸಗಿ, ಅರವಿಂದ ಕಾಮತ್ ಸೇರಿದಂತೆ ಹಲವು ಪದಾಧಿಕಾರಿಗಳು ಉಪಸ್ಥಿತರಿದ್ದರು.

### ಶಿಕ್ಷಕರಿಗೆ ನಾವು ಆಭಾರಿಗಳಾಗಿರಬೇಕು



ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಕರು ಮುಗ್ಧ ಮಕ್ಕಳಲ್ಲಿ ಜ್ಞಾನದ ಬೀಜ ಬಿತ್ತಿ, ನವ ಸಮಾಜ ನಿರ್ಮಾಣಕ್ಕೆ ಕಾರಣರಾಗುವ ಪರಿಶ್ರಮಿಗಳು. ಶಿಕ್ಷಕ ವೃತ್ತಿ ಪವಿತ್ರವಾಗಿದ್ದು, ಅವರ ಸೇವೆಗೆ ನಾವೆಲ್ಲರೂ ಆಭಾರಿಗಳಾಗಿರಬೇಕು ಎಂದು ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ. ಪ್ರದೀಪ ಉಗಲಾಟ ಹೇಳಿದರು.

ನಗರದ ರೋಟರಿ ಐ ಕೇರ್ ಸೆಂಟರ್‌ನಲ್ಲಿ ಗದಗ-ಬೆಟಗೇರಿ ರೋಟರಿ ಕ್ಲಬ್ ವತಿಯಿಂದ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಹಾಗೂ ಸನ್ಮಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರ ಜೀವನ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದು. ಬಾಲ್ಯದಲ್ಲಿ ಅವರು ನೀಡಿದ ಜ್ಞಾನ ಹಾಗೂ ಮಾರ್ಗದರ್ಶನವೇ ವ್ಯಕ್ತಿತ್ವ ವಿಕಸನಕ್ಕೆ ಪ್ರೇರಣೆಯಾಗುತ್ತದೆ. ಸಮಾಜದಲ್ಲಿ ಗೌರವದ ಸ್ಥಾನ ಪಡೆದಿರುವ ಶಿಕ್ಷಕರು ಸದಾ ಆದರ್ಶಪ್ರಾಯರು ಎಂದರು.

ಡಾ. ಧನೇಶ ದೇಸಾಯಿ ಮಾತನಾಡಿ, ಅರಿವಿಲ್ಲದ ಜಗತ್ತನ್ನು ಅರಿವಿನತ್ತ ಕರೆದೊಯ್ಯುವ ಕಾಯಕಯೋಗಿಗಳೇ ಶಿಕ್ಷಕರು. ಅವರ ಪರಿಶ್ರಮ ನಮ್ಮ ಬದುಕಿಗೆ ದಾರಿದೀಪವಾಗಿದೆ ಎಂದರು.

ಡಾ. ಶೇಖರ ಸಜ್ಜನರ ಮಾತನಾಡಿ, ಕಲಿಯುವುದನ್ನು ಹಾಗೂ ಕಲಿಸುವುದನ್ನು ಜೀವನದ ಕಾಯಕವಾಗಿಸಿಕೊಂಡಿರುವ ಶಿಕ್ಷಕರು ಅಕ್ಷರದ ಮೂಲಕ ಬದುಕು ರೂಪಿಸುವವರು. ರೋಟರಿ ಕ್ಲಬ್ ಪ್ರತಿವರ್ಷ ಶಿಕ್ಷಕರನ್ನು ಗೌರವಿಸುತ್ತಿರುವುದು ಶ್ಲಾಘನೀಯ ಎಂದರು.

ಡಾ. ಪ್ರಕಾಶ ಕಲೋಳಗಿ ಮಾತನಾಡಿ, ಬದಲಾಗುತ್ತಿರುವ ಕಾಲಘಟ್ಟದಲ್ಲಿ ಶಿಕ್ಷಕರ ಜವಾಬ್ದಾರಿ ಹೆಚ್ಚಾಗಿದ್ದರೂ ಅವರ ಸೇವಾ ಮನೋಭಾವ ಕುಗ್ಗಿಲ್ಲ. ಅವರ ಪರಿಶ್ರಮವನ್ನು ಗುರುತಿಸಿ ಗೌರವಿಸುವುದು ನಮ್ಮ ಕರ್ತವ್ಯ ಎಂದರು.

ಶಿಕ್ಷಕರ ದಿನಾಚರಣೆ ಅಂಗವಾಗಿ ಗದಗ ಯುಆರ್‌ಸಿ ಕೇಂದ್ರದ ಸಮೂಹ ಸಂಪನ್ಮೂಲ ವ್ಯಕ್ತಿ ಶ್ಯಾಮ್ ಲಾಂಡೆ, ಗೊಜನೂರಿನ ಎಂ.ಪಿ.ಎಸ್.ಆರ್. ವಸತಿ ಶಾಲೆಯ ಪ್ರಾಚಾರ್ಯ ನಿಂಗಪ್ಪ ಹತ್ತಿಕಾಳ ಹಾಗೂ ಶಿಕ್ಷಕಿಯರಾದ ಸುನೀತಾ ಕಾಮತ ಮತ್ತು ಈರಮ್ಮ ಕಬ್ಬೇರಹಳ್ಳಿ ಅವರನ್ನು ಸನ್ಮಾನಿಸಲಾಯಿತು.

ರೋಟರಿ ವೆಲ್ಫೇರ್ ಅಧ್ಯಕ್ಷ ಶ್ರೀಧರ ಸುಲ್ತಾನಪೂರ ಸ್ವಾಗತಿಸಿದರು. ವಿನಯ ಟೀಕಾರೆ ನಿರೂಪಿಸಿದರು. ಕಾರ್ಯದರ್ಶಿ ಅಕ್ಷಯ್ ಶೆಟ್ಟಿ ವಂದಿಸಿದರು. ಕ್ಲಬ್ ಸದಸ್ಯರು ಹಾಗೂ ಸನ್ಮಾನಿತರ ಆತ್ಮೀಯರು ಉಪಸ್ಥಿತರಿದ್ದರು.

> ಶಿಕ್ಷಕರ ಪರಿಶ್ರಮದಿಂದಲೇ ವ್ಯಕ್ತಿಯ ಬದುಕಿಗೆ ದಿಕ್ಕು ಸಿಗುತ್ತದೆ. ಪವಿತ್ರವಾದ ಶಿಕ್ಷಕ ವೃತ್ತಿಗೆ ನಾವೆಲ್ಲರೂ ಸದಾ ಆಭಾರಿಗಳಾಗಿರಬೇಕು.
>
> – ಡಾ. ಪ್ರದೀಪ ಉಗಲಾಟ, ಅಧ್ಯಕ್ಷರು, ಗದಗ-ಬೆಟಗೇರಿ ರೋಟರಿ ಕ್ಲಬ್

### ಆಹಾರ ಉದ್ಯಮ ಆರಂಭಕ್ಕೆ ಸರ್ಕಾರದ ಸಾಥ್

ವಿಜಯಸಾಕ್ಷಿ ಸುದ್ದಿ, ಗದಗ

ಆತ್ಮನಿರ್ಭರ ಭಾರತ ಅಭಿಯಾನದಡಿ ಜಾರಿಯಲ್ಲಿರುವ ಪ್ರಧಾನಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ (ಕಊಈಒಇ)ಯನ್ನು ಕೇಂದ್ರ ಸರ್ಕಾರ 2027ರ ಮಾರ್ಚ್ 31ರವರೆಗೆ ಮುಂದುವರಿಸಿದೆ. ಈಗಿರುವ ನಿಯಮ ಮತ್ತು ಷರತ್ತುಗಳಲ್ಲೇ ಯೋಜನೆಯನ್ನು ವಿಸ್ತರಿಸಲಾಗಿದೆ.

ಯೋಜನೆಯಡಿ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ಮೌಲ್ಯವರ್ಧನೆಗೆ ಉತ್ತೇಜನ ನೀಡಲು ಸಾಲ ಸಂಪರ್ಕಿತ ಸಹಾಯಧನದೊಂದಿಗೆ ಹೊಸ ಆಹಾರ ಸಂಸ್ಕರಣಾ ಘಟಕ ಸ್ಥಾಪಿಸಲು ಅಥವಾ ಈಗಾಗಲೇ ಇರುವ ಘಟಕಗಳನ್ನು ಉನ್ನತೀಕರಿಸಲು ಅವಕಾಶವಿದೆ. 18 ವರ್ಷ ಮೇಲ್ಪಟ್ಟವರು ಅರ್ಜಿ ಸಲ್ಲಿಸಬಹುದಾಗಿದ್ದು, ಯಾವುದೇ ಕನಿಷ್ಠ ವಿದ್ಯಾರ್ಹತೆ ಅಗತ್ಯವಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ತಿಳಿಸಿದ್ದಾರೆ.

ಗದಗ ಜಿಲ್ಲೆಯಲ್ಲಿ 2025-26ನೇ ಸಾಲಿನಲ್ಲಿ 100 ಘಟಕಗಳಿಗೆ ಸಾಲ ಮಂಜೂರಾಗಿದ್ದು, ಯೋಜನೆ ಆರಂಭವಾದ ಬಳಿಕ ಈವರೆಗೆ ಒಟ್ಟು 314 ಘಟಕಗಳಿಗೆ ಸಾಲ ಮಂಜೂರಾಗಿದೆ.

ರೊಟ್ಟಿ, ಶಾವಿಗೆ, ಹಪ್ಪಳ, ಚಕ್ಕಲಿ, ಹಿಟ್ಟಿನ ಗಿರಣಿ, ಗಾಣದ ಎಣ್ಣೆ, ಖಾರದಪುಡಿ, ಮಸಾಲೆಪುಡಿ, ಚಟ್ನಿಪುಡಿ, ಅರಿಶಿನಪುಡಿ, ಉಪ್ಪಿನಕಾಯಿ, ಬೇಕರಿ ಪದಾರ್ಥಗಳು, ಧಾನ್ಯ ಸಂಸ್ಕರಣೆ, ಹಣ್ಣು ಮತ್ತು ತರಕಾರಿ ಸಂಸ್ಕರಣೆ, ಸಿರಿಧಾನ್ಯ ಉತ್ಪನ್ನಗಳು, ಹಾಲಿನ ಉತ್ಪನ್ನಗಳು, ಬೆಲ್ಲದ ಉತ್ಪನ್ನಗಳು, ಚುರುಮರಿ, ಅವಲಕ್ಕಿ, ಪುಠಾಣಿ ಸೇರಿದಂತೆ ವಿವಿಧ ಆಹಾರ ಸಂಸ್ಕರಣಾ ಘಟಕಗಳನ್ನು ಆರಂಭಿಸಲು ಅವಕಾಶವಿದೆ.

ಅರ್ಜಿಯನ್ನು ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳ ಮೂಲಕ ಆನ್‌ಲೈನ್‌ನಲ್ಲಿ ಸಲ್ಲಿಸಬೇಕು. ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್, ರೇಷನ್ ಕಾರ್ಡ್, ವಿದ್ಯುತ್ ಬಿಲ್, ಆರು ತಿಂಗಳ ಬ್ಯಾಂಕ್ ಸ್ಟೇಟ್‌ಮೆಂಟ್ ಹಾಗೂ ಘಟಕ ಸ್ಥಾಪಿಸುವ ಸ್ಥಳದ ಉತಾರ ಅಥವಾ ಬಾಡಿಗೆ ಕರಾರು ಪತ್ರ ಸೇರಿದಂತೆ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು. ಜಿಪಿಎಸ್ ಲೊಕೇಶನ್ ಸಹಿತ ಅರ್ಜಿದಾರರ ಫೋಟೋ ಕೂಡ ಅಗತ್ಯವಿದೆ.

ಯೋಜನೆಯ ಲಾಭ ಪಡೆಯಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಜಂಟಿ ಕೃಷಿ ನಿರ್ದೇಶಕರ ಕಚೇರಿ, ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸುವಂತೆ ಕೋರಲಾಗಿದೆ.

## ಸಣ್ಣ ಸುದ್ದಿಗಳು

# ತಾಲೂಕು ಕ್ರೀಡಾಕೂಟದಲ್ಲಿ ಬಿಸಿಎನ್ ವಿದ್ಯಾರ್ಥಿಗಳ ಸಾಧನೆ




ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಲಕ್ಷ್ಮೇಶ್ವರದ ಬಿಸಿಎನ್ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ವಿವಿಧ ಕ್ರೀಡಾ ವಿಭಾಗಗಳಲ್ಲಿ ಉತ್ತಮ ಪ್ರದರ್ಶನ ನೀಡಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಪ್ರಾಥಮಿಕ ವಿಭಾಗದಲ್ಲಿ ಶಶಿಧರ ನಂದಣ್ಣವರ ಅಡೆತಡೆ ಓಟ ಹಾಗೂ 100 ಮೀಟರ್ ಓಟದಲ್ಲಿ, ವರ್ಷಿತಾ ವಾಲ್ಮೀಕಿ ಅಡೆತಡೆ ಓಟ ಹಾಗೂ ಎತ್ತರ ಜಿಗಿತದಲ್ಲಿ ಸಾಧನೆ ಮಾಡಿದ್ದಾರೆ.

ಪ್ರೌಢ ವಿಭಾಗದಲ್ಲಿ ಆಲಿಯಾ ಪಿರಿಜಾದೆ 100 ಮೀಟರ್ ಓಟ ಹಾಗೂ ತ್ರಿವಿಧ ಜಿಗಿತದಲ್ಲಿ, ದಿವ್ಯಶ್ರೀ ಕಟ್ಟಿಮನಿ ಅಡೆತಡೆ ಓಟದಲ್ಲಿ ಉತ್ತಮ ಪ್ರದರ್ಶನ ನೀಡಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಆಡಳಿತ ಮಂಡಳಿ, ಮುಖ್ಯೋಪಾಧ್ಯಾಯರು ಹಾಗೂ ಶಿಕ್ಷಕ ವೃಂದ ಅಭಿನಂದನೆ ಸಲ್ಲಿಸಿದ್ದಾರೆ.

# ಗಾಂಧಿ ಜಯಂತಿ: ಸರ್ವಧರ್ಮ ಪ್ರಾರ್ಥನೆಯ ಮೂಲಕ ಸಾಮರಸ್ಯದ ಸಂದೇಶ




ವಿಜಯಸಾಕ್ಷಿ ಸುದ್ದಿ ಶಿರಹಟ್ಟಿ

ಪಟ್ಟಣದ ಎಫ್.ಎಂ. ಡಬಾಲಿ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಗಾಂಧಿ ಜಯಂತಿ ಅಂಗವಾಗಿ ಸಾವಿತ್ರಿಬಾಯಿ ಫುಲೆ ರೇಂಜರ್ಸ್ ಘಟಕದ ವತಿಯಿಂದ ಸರ್ವಧರ್ಮ ಪ್ರಾರ್ಥನೆ ಕಾರ್ಯಕ್ರಮ ಆಯೋಜಿಸಲಾಯಿತು.

ಮಹಾತ್ಮ ಗಾಂಧೀಜಿಯವರ ಜೀವನ ಹಾಗೂ ಆದರ್ಶಗಳನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವ ಮೂಲಕ ಸರ್ವಧರ್ಮ ಸಮನ್ವಯತೆ ಹಾಗೂ ಸಹಬಾಳ್ವೆಯ ಸಂದೇಶ ಸಾರಲಾಯಿತು. ರೇಂಜರ್ಸ್ ಲೀಡರ್ ಸುಧಾ ಹುಚ್ಚಣ್ಣವರ ಅವರು ಗಾಂಧೀಜಿಯವರ ಜೀವನದ ಪ್ರಮುಖ ತತ್ವಗಳಾದ ಅಹಿಂಸೆ, ಸತ್ಯ, ಶಾಂತಿ ಹಾಗೂ ಸಹಬಾಳ್ವೆಯ ಮೌಲ್ಯಗಳ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು. ಬಳಿಕ ವಿದ್ಯಾರ್ಥಿಗಳಿಂದ ವಿವಿಧ ಧರ್ಮಗಳ ಪ್ರಾರ್ಥನೆ ನೆರವೇರಿಸಲಾಯಿತು.

ಕಾರ್ಯಕ್ರಮದ ಕೊನೆಯಲ್ಲಿ ಒಂದು ನಿಮಿಷ ಮೌನ ಪ್ರಾರ್ಥನೆ ಸಲ್ಲಿಸಿ ಗಾಂಧೀಜಿಯವರ ಆದರ್ಶಗಳನ್ನು ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯ ಎಂ.ಸಿ. ಭಜಂತ್ರಿ, ಎನ್. ಹನುಮರಡ್ಡಿ, ಪಿ.ಎನ್. ಕುಲಕರ್ಣಿ, ರೇಣುಕಾ ಜಗಂಡಬಾವಿ, ಜಿ.ಕೆ. ಕರ್ಕಣ್ಣವರ, ಎಫ್.ಎ. ಬಾಬುಕಾನವರ, ಆರ್.ಎಫ್. ಬಡಕುರ್ಕಿ, ನೌಶಾದ್ ಶಿಗ್ಲಿ, ಸುನಿಲ್ ಲಮಾಣಿ, ಎನ್.ಆರ್. ಉಡಚಗೊಂಡ, ರೇಂಜರ್ಸ್ ಘಟಕದ ಲೀಡರ್ ಸ್ನೇಹಾ ಮುಳುಗುಂದ, ವಿಜಯಲಕ್ಷ್ಮಿ ಡೊಳ್ಳಿನ, ಒಂಟಿಯವರ, ಚೈತ್ರ ಲಮಾಣಿ, ಸುಧಾ ಬಡ್ಡೆಪ್ಪನವರ, ಸುಮಯ್ಯ, ಲಕ್ಷ್ಮಿ ಮುಳಗುಂದ, ಸನಾ ಸೇರಿದಂತೆ ರೇಂಜರ್ಸ್‌ಗಳು ಉಪಸ್ಥಿತರಿದ್ದರು.

# ಹಿಂದೂ-ಮುಸ್ಲಿಂ ಭಕ್ತರಿಂದ ಸಾಮರಸ್ಯದ ಪ್ರಾರ್ಥನೆ

## ಹೂವು-ದೀಪಗಳ ಅಲಂಕಾರದಲ್ಲಿ ಕಂಗೊಳಿಸಿದ ಝೂಂಡಾ ಕಟ್ಟೆ



ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ನಂದಿಪುರ ಪುಣ್ಯಕ್ಷೇತ್ರದಲ್ಲಿ ಸೂಫಿ ಸಂತ ಮೆಹಬೂಬ್-ಎ-ಸುಬಹಾನಿ ಅವರ ಸ್ಮರಣಾರ್ಥ ಗ್ಯಾರವಿ ಹಬ್ಬವನ್ನು ಭಕ್ತಿ ಹಾಗೂ ಸೌಹಾರ್ದತೆಯಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾಬು ಸುಬಾನಿ ಅವರ ಝೂಂಡಾ ಕಟ್ಟೆಯನ್ನು ವಿವಿಧ ಬಗೆಯ ಹೂವುಗಳಿಂದ ಅಲಂಕರಿಸಿ, ದೀಪಗಳಿಂದ ಆರತಿ ಬೆಳಗಿಸಲಾಯಿತು. ಹೂವು ಮತ್ತು ದೀಪಗಳ ಅಲಂಕಾರದಿಂದ ಝೂಂಡಾ ಕಟ್ಟೆ ವಿಶೇಷವಾಗಿ ಕಂಗೊಳಿಸಿತು.

ಪುಣ್ಯಕ್ಷೇತ್ರದ ಡಾ. ಮಹೇಶ್ವರ ಸ್ವಾಮೀಜಿ ಹಾಗೂ ಗದ್ದಿಕೆರೆ ಹಿರೇಮಠದ ಅಭಿನವ ಚರಂತೇಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

ಹಿಂದೂ ಹಾಗೂ ಮುಸ್ಲಿಂ ಸಮುದಾಯದವರು ಒಟ್ಟಾಗಿ ಪಾಲ್ಗೊಂಡು ಸಕ್ಕರೆ, ಮಾದಲಿ ಹಾಗೂ ಅನ್ನ ಸಮರ್ಪಿಸಿ ಪ್ರಾರ್ಥನೆ ಸಲ್ಲಿಸಿದರು. ಭಕ್ತರು ಶ್ರದ್ಧೆಯಿಂದ ಪೂಜೆ ಸಲ್ಲಿಸಿ ಸಂತನ ಸ್ಮರಣೆ ಮಾಡಿದರು.

ಕಾರ್ಯಕ್ರಮದಲ್ಲಿ ಮೌಲಾನಾ ಸಿರಾಜುದ್ದೀನ್, ಪಿ. ನಬೀಸಾಬ್, ಆರ್. ಚಾಂದಬಾಷಾ, ಪಿ. ಸಯ್ಯದ್ ಅಲಿ, ಜೆ.ಎಸ್. ದಾದಾಪೀರ್, ಪಿ. ಸುಬಾನ್ ಸಾಬ್, ಟಿ. ಜಯನುಲ್ಲಾ ಸಾಬ್, ರೇಣುಸಾಬ್, ಷರೀಫ್ ಸಾಬ್, ರಹಿಮಾನ್, ಯೂಸುಫ್ ಅಹಮದ್, ಎಚ್.ಎಂ. ಗುರುಬಸವರಾಜಯ್ಯ, ಎಸ್.ಎಂ. ಶಂಕ್ರಯ್ಯ, ಬಿ. ದೇವರೆಡ್ಡಿ, ಬಿ.ಎಂ. ಗುರುಲಿಂಗಯ್ಯ, ಬಿ.ಎಂ. ಶಿವಯ್ಯ, ಬಣಕಾರ ದೊಡ್ಡ ಬಸಪ್ಪ, ಬಸಾಪುರದ ದೊಡ್ಡ ಬಸಪ್ಪ ಸೇರಿದಂತೆ ಗ್ರಾಮದ ದೈವಸ್ಥರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

ಗ್ಯಾರವಿ ಹಬ್ಬಕ್ಕೆ ಆಗಮಿಸಿದ ನೂರಾರು ಭಕ್ತರಿಗೆ ಮಾದಲಿ, ತುಪ್ಪ, ಹಾಲು ಹಾಗೂ ಪಲಾವ್ ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು.

## ಶಾಲಾ ಮಕ್ಕಳು, ಯುವಕರು, ಗ್ರಾಮಸ್ಥರಿಂದ ಅದ್ದೂರಿ ಸ್ವಾಗತ | ತೆರೆದ ಜೀಪಿನಲ್ಲಿ ಮೆರವಣಿಗೆ

# 17 ವರ್ಷಗಳ ಸೈನ್ಯ ಸೇವೆ ಬಳಿಕ ತಾಯ್ನಾಡಿಗೆ ರಹಿಮಾನ ಹೆಬ್ಬಳ್ಳಿ

ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಸೈನ್ಯದಲ್ಲಿ 17 ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತ್ತರಾದ ಹುಯಿಲಗೋಳ ಗ್ರಾಮದ ನಿವಾಸಿ 'ನಾಯಕ' ರಹಿಮಾನ ಎಂ. ಹೆಬ್ಬಳ್ಳಿ ಅವರು ಸ್ವಗ್ರಾಮಕ್ಕೆ ಆಗಮಿಸಿದ ಹಿನ್ನೆಲೆಯಲ್ಲಿ ಗ್ರಾಮಸ್ಥರು, ಗೆಳೆಯರ ಬಳಗ, ಶಾಲಾ ಮಕ್ಕಳು ಹಾಗೂ ಯುವಕರು ಅದ್ದೂರಿಯಾಗಿ ಸ್ವಾಗತಿಸಿದರು.



ಗ್ರಾಮದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಬಳಿ ರಹಿಮಾನ ಹೆಬ್ಬಳ್ಳಿ ಅವರು ಆಗಮಿಸುತ್ತಿದ್ದಂತೆ ವಿದ್ಯಾರ್ಥಿಗಳು, ಶಿಕ್ಷಕರು, ಯುವಕರು, ಗ್ರಾಮಸ್ಥರು ಹಾಗೂ ಗೆಳೆಯರು ಹೂಮಳೆ ಸುರಿಸಿ ಸಂಭ್ರಮದಿಂದ ಬರಮಾಡಿಕೊಂಡರು. ಬಳಿಕ ಅವರನ್ನು ತೆರೆದ ಜೀಪಿನಲ್ಲಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ಮನೆಗೆ ಕರೆದೊಯ್ಯಲಾಯಿತು.

ಮೆರವಣಿಗೆಯ ಸಂದರ್ಭದಲ್ಲಿ ನಾಡಕವಿ ಹುಯಿಲಗೋಳ ನಾರಾಯಣರಾವ್ ಹಾಗೂ ಸಂವಿಧಾನಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗಳಿಗೆ ಮಾಲಾರ್ಪಣೆ ಮಾಡಿ ನಮನ ಸಲ್ಲಿಸಲಾಯಿತು. ನಂತರ ಗ್ರಾಮದ ಶ್ರೀ ಸೂಗೀರೇಶ್ವರ ದೇವಸ್ಥಾನ, ಶ್ರೀ ದುರ್ಗಾದೇವಿ ದೇವಸ್ಥಾನ ಹಾಗೂ ಶ್ರೀ ಮಾರುತಿ ದೇವಸ್ಥಾನಗಳಿಗೆ ತೆರಳಿ ವಿಶೇಷ ಪೂಜೆ ಸಲ್ಲಿಸಿ ದರ್ಶನ ಪಡೆದರು.

ಮೆರವಣಿಗೆಯುದ್ದಕ್ಕೂ ವಿದ್ಯಾರ್ಥಿಗಳು ಹಾಗೂ ಯುವಕರು 'ಭಾರತ ಮಾತಾ ಕೀ ಜೈ', 'ನಾಯಕ ರಹಿಮಾನ ಹೆಬ್ಬಳ್ಳಿಗೆ ಜಯವಾಗಲಿ' ಎಂಬ ಘೋಷಣೆಗಳನ್ನು ಮೊಳಗಿಸಿದರು. ವಿದ್ಯಾರ್ಥಿಗಳು ಹಾಗೂ ಯುವಕರು ಹೆಜ್ಜೆ ಹಾಕಿ, ಕುಣಿದು ಕುಪ್ಪಳಿಸುವ ಮೂಲಕ ಸಂಭ್ರಮಿಸಿದರು.

17 ವರ್ಷಗಳ ಸೈನ್ಯ ಸೇವೆ ಪೂರ್ಣಗೊಳಿಸಿ ತಾಯ್ನಾಡಿಗೆ ಮರಳಿದ ರಹಿಮಾನ ಹೆಬ್ಬಳ್ಳಿ ಅವರನ್ನು ಗ್ರಾಮದ ವಿವಿಧೆಡೆ ಸನ್ಮಾನಿಸಲಾಯಿತು. ದೇವಸ್ಥಾನ ಮಂಡಳಿಗಳು, ಗ್ರಾಮ ಪಂಚಾಯಿತಿ, ಗೆಳೆಯರ ಬಳಗ ಹಾಗೂ ಗ್ರಾಮಸ್ಥರು ಅವರನ್ನು ಗೌರವಿಸಿ ಶುಭ ಹಾರೈಸಿದರು. ಕುಟುಂಬಸ್ಥರು ಆರತಿ ಬೆಳಗಿ ಆತ್ಮೀಯವಾಗಿ ಮನೆಗೆ ಬರಮಾಡಿಕೊಂಡರು.

ರಹಿಮಾನ ಹೆಬ್ಬಳ್ಳಿ ಅವರು ಜಮ್ಮು-ಕಾಶ್ಮೀರ, ಪಂಜಾಬ್, ರಾಜಸ್ಥಾನ ಸೇರಿದಂತೆ ದೇಶದ ವಿವಿಧ ಗಡಿ ಪ್ರದೇಶಗಳಲ್ಲಿ ಸೇವೆ ಸಲ್ಲಿಸಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮದ ಯುವಕರಾದ ಚಂದ್ರು ಹಂಚಿನಾಳ, ಮುತ್ತು ಪಡೇಸೂರ, ಚಂದ್ರು ಪೂಜಾರ, ಮಂಜುನಾಥ ಹುಯಿಲಗೋಳ, ಹುಸೇನಸಾಬ ಕುರಹಟ್ಟಿ, ಖಾದರಸಾಬ ಬೂದಿಹಾಳ, ಮಹಮ್ಮದಲಿ ಕೌತಾಳ, ರಮೇಶ ಹೊಸಮನಿ, ದೇವು ಹುಯಿಲಗೋಳ, ಶಿವರಾಯಪ್ಪ ಯಲಿಗಾರ, ಜಗದೀಶ ಹೊಸಳ್ಳಿ, ಶರಣಪ್ಪ ಹುಯಿಲಗೋಳ, ಶರಣಪ್ಪ ಕಡಿಯವರ, ರಮೇಶ ಕಡಿಯವರ, ರಂಗನಾಥ ಕಡಿಯವರ, ಹೇಮಂತ ದಾಸರ, ಮುತ್ತು ಅಂಗಡಿ, ಮಹೇಶ ಹಾಳಕೇರಿ, ಮಹೇಶಗೌಡ ಪಾಟೀಲ, ಹುಚ್ಚನಗೌಡ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಗದಗ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ, ವಿಶ್ವನಾಥ ನಾಯ್ಕರ, ಡಿ.ಎಸ್. ದಿಡ್ಡಿಮನಿ ನೇತೃತ್ವದಲ್ಲಿ ಹಲವು ಮಾಜಿ ಸೈನಿಕರು ಹಾಗೂ ವೀರನಾರಿಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ರಹಿಮಾನ ಹೆಬ್ಬಳ್ಳಿ ಅವರ ತಂದೆ ಮೌಲಾಸಾಬ ಅವರು ತಮ್ಮ ಐದು ಮಕ್ಕಳ ಪೈಕಿ ನಾಲ್ವರು ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿರುವುದನ್ನು ಸ್ಮರಿಸಿದರು. ರಹಿಮಾನ ಸೇರಿದಂತೆ ಇಬ್ಬರು ಮಕ್ಕಳು ಇದೀಗ ಮಾಜಿ ಸೈನಿಕರಾಗಿದ್ದು, ಮತ್ತಿಬ್ಬರು ಇನ್ನೂ ಸೇನಾ ಸೇವೆಯಲ್ಲಿದ್ದಾರೆ.

> ಸ್ನೇಹಿತರು ಹಾಗೂ ಗ್ರಾಮಸ್ಥರು ನನ್ನ ಮಗನನ್ನು ಇಷ್ಟು ಅದ್ದೂರಿಯಾಗಿ ಸ್ವಾಗತಿಸಿರುವುದು ಬಹಳ ಸಂತೋಷ ತಂದಿದೆ. ಅವರ ಪ್ರೀತಿ ಮತ್ತು ಗೌರವಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ.
> – ಮೌಲಾಸಾಬ ಹೆಬ್ಬಳ್ಳಿ, ಮಾಜಿ ಸೈನಿಕ

### ಮಹಾಂತೇಶ ಕರಬಾಣದ ಅವರಿಗೂ ಸಾಥ್

ಕಳೆದ ವರ್ಷ ಭಾರತೀಯ ಸೇನೆಯಿಂದ ಸ್ವಗ್ರಾಮಕ್ಕೆ ಮರಳಿದ್ದ ಮಾಜಿ ಸೈನಿಕ ಮಹಾಂತೇಶ ಕರಬಾಣದ ಅವರನ್ನೂ ಇದೇ ಸಂದರ್ಭದಲ್ಲಿ ಗ್ರಾಮಸ್ಥರು ಹಾಗೂ ಯುವಕರು ಮೆರವಣಿಗೆ ಮೂಲಕ ಕರೆತಂದಿದ್ದು ವಿಶೇಷವಾಗಿತ್ತು.

## ಪರಿಸರ ಸಂರಕ್ಷಣೆ, ಮಹಿಳಾ ಸಬಲೀಕರಣ, ಅಸ್ಪೃಶ್ಯತೆ ನಿರ್ಮೂಲನೆಗೆ ಮೌಲ್ಯಗಳ ಅಳವಡಿಕೆ ಅಗತ್ಯ

# ಗಾಂಧೀ ಚಿಂತನೆ ಕಡೆಗಣಿಸುವುದೇ ವೈಚಾರಿಕ ಹತ್ಯೆ



> ಗಾಂಧೀಜಿಯವರ ಚಿಂತನೆಗಳನ್ನು ಕಡೆಗಣಿಸುವ ಮೂಲಕ ಅವರ ವಿಚಾರಗಳನ್ನು ವೈಚಾರಿಕವಾಗಿ ಹತ್ಯೆ ಮಾಡಲಾಗುತ್ತಿದೆ. ಇಂದಿನ ಸಮಾಜದಲ್ಲಿ ಅವರ ಮೌಲ್ಯಗಳನ್ನು ಬದುಕಿನ ಭಾಗವಾಗಿಸಿಕೊಳ್ಳುವುದು ಅತ್ಯಗತ್ಯ.
> – ಎಸ್.ಎಸ್. ಪಾಟೀಲ, ಮಾಜಿ ಸಚಿವ

ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧೀಜಿ ಅವರ ವಿಚಾರಧಾರೆ ಇಂದಿನ ಸಮಾಜಕ್ಕೂ ಪ್ರಸ್ತುತವಾಗಿದ್ದು, ಪರಿಸರ ಸಂರಕ್ಷಣೆ, ಅಸ್ಪೃಶ್ಯತೆ ನಿರ್ಮೂಲನೆ, ಮಹಿಳಾ ಸ್ವಾತಂತ್ರ್ಯ, ನೈತಿಕತೆ, ರಾಜಕೀಯ ಮೌಲ್ಯಗಳು ಹಾಗೂ ಭ್ರಷ್ಟಾಚಾರ ನಿರ್ಮೂಲನೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಅದನ್ನು ಅಳವಡಿಸಿಕೊಳ್ಳುವ ಅಗತ್ಯವಿದೆ ಎಂದು ಮಾಜಿ ಸಹಕಾರಿ ಮತ್ತು ಅರಣ್ಯ ಸಚಿವ ಎಸ್.ಎಸ್. ಪಾಟೀಲ ಹೇಳಿದರು.

ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಶುಕ್ರವಾರ ಆಯೋಜಿಸಿದ್ದ ಮಹಾತ್ಮ ಗಾಂಧೀಜಿ ಅವರ 157ನೇ ಜಯಂತಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರೀಜಿ ಅವರ 122ನೇ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

20ನೇ ಶತಮಾನದಲ್ಲಿ ಬಸವಣ್ಣನವರ ತತ್ವಗಳನ್ನು ಆಚರಣೆಗೆ ತಂದ ಪ್ರಮುಖ ವ್ಯಕ್ತಿಗಳಲ್ಲಿ ಗಾಂಧೀಜಿ ಒಬ್ಬರು. ದೈಹಿಕವಾಗಿ ಅವರನ್ನು ಹತ್ಯೆ ಮಾಡಲಾಗಿದ್ದರೂ, ಅವರ ಮೌಲ್ಯ ಮತ್ತು ವಿಚಾರಗಳನ್ನು ಕಡೆಗಣಿಸುವ ಮೂಲಕ ವೈಚಾರಿಕವಾಗಿ ಚಿಂತನೆಗಳನ್ನು ಹತ್ಯೆ ಮಾಡುತ್ತಿರುವುದು ಕಳವಳಕಾರಿ ಸಂಗತಿ ಎಂದು ಹೇಳಿದರು.

ಗ್ರಾಮ ಸ್ವರಾಜ್ಯದ ಪರಿಕಲ್ಪನೆಯನ್ನು ಆಧಾರವಾಗಿಟ್ಟುಕೊಂಡು ವಿಶ್ವವಿದ್ಯಾಲಯ ಮುನ್ನಡೆಯುತ್ತಿರುವುದು ಶ್ಲಾಘನೀಯ. ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳ ಬಲವರ್ಧನೆಗೆ ಇದು ಪ್ರಮುಖ ಜ್ಞಾನಕೇಂದ್ರವಾಗಬೇಕು. ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳಿಗೆ ತರಬೇತಿ ನೀಡುವ ಪ್ರಮುಖ ಸಂಸ್ಥೆಯಾಗಿ ರೂಪುಗೊಳ್ಳಬೇಕು ಎಂದು ಆಶಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕುಲಪತಿ ಪ್ರೊ. ಡಾ. ಸುರೇಶ್ ವಿ. ನಾಡಗೌಡರ ಮಾತನಾಡಿ, ಸರಳತೆ, ಪ್ರಾಮಾಣಿಕತೆ, ದೇಶಸೇವೆ ಹಾಗೂ ನೈತಿಕ ಮೌಲ್ಯಗಳನ್ನು ವಿದ್ಯಾರ್ಥಿಗಳು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಗ್ರಾಮೀಣ ಭಾರತದ ಸಮಗ್ರ ಅಭಿವೃದ್ಧಿಯ ಜತೆಗೆ ಸಾಮಾಜಿಕ ಹೊಣೆಗಾರಿಕೆ ಹೊಂದಿರುವ ಯುವಜನರನ್ನು ರೂಪಿಸುವುದು ಸಂಸ್ಥೆಯ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಕುಲಸಚಿವ ಪ್ರೊ. ಅಮರೇಶ್ ಯಾತಗಲ್ ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ಮೌಲ್ಯ, ಶಿಸ್ತು ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸಿಕೊಳ್ಳಬೇಕು. ರಾಷ್ಟ್ರ ನಾಯಕರ ಜೀವನಾದರ್ಶಗಳು ಇದಕ್ಕೆ ಪ್ರೇರಣೆಯಾಗಬೇಕು ಎಂದರು.

ಹಣಕಾಸು ಅಧಿಕಾರಿ ಪ್ರಶಾಂತ್ ಜೆ.ಸಿ. ಮಾತನಾಡಿ, ಸರಳ ಜೀವನ, ಪ್ರಾಮಾಣಿಕತೆ ಹಾಗೂ ದೇಶದ ಮೇಲಿನ ಬದ್ಧತೆಯನ್ನು ಮುಂದಿನ ಪೀಳಿಗೆ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಸಬರಮತಿ ಆಶ್ರಮದ ಸಂಚಾಲಕ ಪ್ರಕಾಶ್ ಎಸ್. ಮಾಚೇನಹಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು. ನಿಂಗಪ್ಪ ಶಿವಬಸಣ್ಣವರ ವಂದಿಸಿದರು.

ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯದ ಅಧಿಕಾರಿಗಳು, ಅಧ್ಯಾಪಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಗಾಂಧೀಜಿ ಮತ್ತು ಶಾಸ್ತ್ರೀಜಿ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಲಾಯಿತು.

# ಗಾಂಧೀಜಿ ಆದರ್ಶಗಳ ಹಾದಿಯಲ್ಲಿ ಸಾಗೋಣ



ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸ್ಕೂಲ್ ಚಂದನದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ 157ನೇ ಜನ್ಮದಿನ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರೀಜಿ ಅವರ ಜಯಂತಿಯನ್ನು ಶುಕ್ರವಾರ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರಾಂಶುಪಾಲ ರಾಮು ಜಿ. ಮಾತನಾಡಿ, ಮಹಾತ್ಮ ಗಾಂಧೀಜಿ ಅವರ ಸತ್ಯ, ಶಾಂತಿ, ಅಹಿಂಸೆ ಹಾಗೂ ಸ್ವರಾಜ್ಯದ ಪರಿಕಲ್ಪನೆಗಳು ಇಂದಿಗೂ ಪ್ರಸ್ತುತವಾಗಿವೆ. ದೇಶದ ಸ್ವಾತಂತ್ರ್ಯಕ್ಕಾಗಿ ಗಾಂಧೀಜಿ ನಡೆಸಿದ ವಿವಿಧ ಚಳವಳಿಗಳು ಹಾಗೂ ಅವರ ಸರಳ ಬದುಕು ಯುವ ಪೀಳಿಗೆಗೆ ಸದಾ ಮಾರ್ಗದರ್ಶಕವಾಗಿವೆ ಎಂದು ಹೇಳಿದರು.

ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರೀಜಿ ಅವರು ಸರಳ ಹಾಗೂ ಸಾತ್ವಿಕ ಬದುಕು ನಡೆಸಿ ದೇಶದ ಪ್ರಗತಿಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಅವರ ಸೇವೆ ಮತ್ತು ಆದರ್ಶಗಳನ್ನು ದೇಶ ಸದಾ ಸ್ಮರಿಸುತ್ತದೆ ಎಂದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಮಹಾತ್ಮ ಗಾಂಧೀಜಿ ಅವರ ಜೀವನ ಚರಿತ್ರೆ ಹಾಗೂ ದೇಶಕ್ಕಾಗಿ ಅವರು ನಡೆಸಿದ ಹೋರಾಟಗಳ ಕುರಿತು ಮಾತನಾಡಿದರು. ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಗಾಂಧೀಜಿ ಆದರ್ಶ ಪಾಲಿಸೋಣ: ಕೆಂಚನಗೌಡ್ರ



ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಹಾತ್ಮ ಗಾಂಧೀಜಿ ಅವರ ಚಿಂತನೆ, ಆದರ್ಶ ಹಾಗೂ ಜೀವನ ಮೌಲ್ಯಗಳನ್ನು ಪ್ರತಿಯೊಬ್ಬರೂ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಶಿಕ್ಷಕ ಪಿ.ಬಿ. ಕೆಂಚನಗೌಡ್ರ ಹೇಳಿದರು.

ಪಟ್ಟಣದ ವಿದ್ಯಾನಗರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರೀಜಿ ಜಯಂತಿ ಅಂಗವಾಗಿ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಗಾಂಧೀಜಿ ಅಹಿಂಸೆ ಹಾಗೂ ಶಾಂತಿಯುತ ಹೋರಾಟದ ಮೂಲಕ ಸ್ವಾತಂತ್ರ್ಯ ಸಂಗ್ರಾಮಕ್ಕೆ ಹೊಸ ದಿಕ್ಕು ನೀಡಿದ್ದಲ್ಲದೆ, ಸ್ವಚ್ಛತೆಗೂ ಆದ್ಯತೆ ನೀಡಿದ್ದರು. ಶಾಸ್ತ್ರೀಜಿ ಸರಳತೆ, ಪ್ರಾಮಾಣಿಕತೆ ಹಾಗೂ ದಕ್ಷ ಆಡಳಿತಕ್ಕೆ ಹೆಸರಾಗಿದ್ದರು. ಇವರ ತತ್ವ ಸಿದ್ಧಾಂತಗಳು ಇಂದಿಗೂ ಪ್ರಸ್ತುತವಾಗಿದ್ದು, ವಿದ್ಯಾರ್ಥಿಗಳು ಅವುಗಳನ್ನು ಪಾಲಿಸಬೇಕು ಎಂದರು.

ಈ ಸಂದರ್ಭದಲ್ಲಿ ಸಹ ಶಿಕ್ಷಕ ಆರ್. ಸೈದಾಪೂರ ಹಾಗೂ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿ ಇಂದು ಕಾಂಗ್ರೆಸ್ ಪ್ರತಿಭಟನೆ

ವಿಜಯಸಾಕ್ಷಿ ಸುದ್ದಿ, ಗದಗ

ಎಸ್ಐಆರ್ (ವೋಟ್ ಚೋರಿ) ಬಹಿರಂಗದ ಹಿನ್ನೆಲೆಯಲ್ಲಿ ಕೇಂದ್ರ ಚುನಾವಣಾ ಆಯೋಗದ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಅ.3ರಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಶನಿವಾರ ಬೆಳಿಗ್ಗೆ 10 ಗಂಟೆಗೆ ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಯಲಿದ್ದು, ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ವಾಸಣ್ಣ ಕುರಡಗಿ ನೇತೃತ್ವ ವಹಿಸಲಿದ್ದಾರೆ.

ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್, ಗ್ರಾಮ ಪಂಚಾಯತ್, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು ಪ್ರತಿಭಟನೆಯಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಲಾಗಿದೆ.

ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವ್‌ಗಾಂಧಿ ಪಂಚಾಯತ್ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ್ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲೀಗಲ್ ರೀಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು ಭಾಗವಹಿಸುವಂತೆ ಕೋರಲಾಗಿದೆ.

ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್. ಪಾಟೀಲ ಹಾಗೂ ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಅವರು ಪಕ್ಷದ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಳ್ಳುವಂತೆ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಗ್ರಾಮ ಆಡಳಿತಾಧಿಕಾರಿ ಪರೀಕ್ಷೆ: ಕೇಂದ್ರಗಳ ಸುತ್ತ 200 ಮೀ. ಪ್ರತಿಬಂಧಕಾಜ್ಞೆ

ವಿಜಯಸಾಕ್ಷಿ ಸುದ್ದಿ, ಗದಗ

ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದದ ಗ್ರಾಮ ಆಡಳಿತಾಧಿಕಾರಿಗಳ ಹುದ್ದೆಗಳ ನೇರ ನೇಮಕಾತಿ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅ.4ರಂದು ಪರೀಕ್ಷೆ ನಡೆಸಲಿದೆ. ಗದಗ ಜಿಲ್ಲೆಯಲ್ಲಿ ಒಟ್ಟು 30 ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾಗಿದೆ.

ಪರೀಕ್ಷೆಯು ಎರಡು ಅವಧಿಯಲ್ಲಿ ನಡೆಯಲಿದ್ದು, ಬೆಳಗ್ಗೆ 10.30ರಿಂದ ಮಧ್ಯಾಹ್ನ 12.30ರವರೆಗೆ ಪತ್ರಿಕೆ-1 ಹಾಗೂ ಮಧ್ಯಾಹ್ನ 2.30ರಿಂದ ಸಂಜೆ 4.30ರವರೆಗೆ ಪತ್ರಿಕೆ-2ರ ಪರೀಕ್ಷೆ ನಡೆಯಲಿದೆ.

ಪರೀಕ್ಷಾ ಸಮಯದಲ್ಲಿ ನಕಲು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಸೇರಿದಂತೆ ಅವ್ಯವಹಾರ ತಡೆಗಟ್ಟಲು ಹಾಗೂ ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು, ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಜಿಲ್ಲೆಯ 30 ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka